ಇನ್ನಷ್ಟು ಸ್ಥಳೀಯ ಸುದ್ದಿಗಳು ಪುಟ 09 ರಲ್ಲಿ

ಕನ್ನಡಪ್ರಭ
ಸೋಮವಾರ 4.05.2026

ಗರಿಷ್ಠ 35°c | ಕನಿಷ್ಠ 23°c

ಸುದ್ದಿ ಸಿಂಚನ

5ರಂದು ಬಸವ ಜಯಂತಿ, ಬಸವಶ್ರೀ ಪ್ರಶಸ್ತಿ ಪ್ರದಾನ

ಮಂಡ್ಯ: ನಗರದ ವೀರಶೈವ ವಿದ್ಯಾರ್ಥಿ ನಿಲಯ ಆವರಣದಲ್ಲಿ ಮೇ 5ರಂದು ನಂಜಮ್ಮ ಮೋಟೆಗೌಡ ಚಾರಿಟಬಲ್ ಮತ್ತು ಎಜುಕೇಶನಲ್ ಟ್ರಸ್ಟ್ ಕೊಪ್ಪ ವತಿಯಿಂದ ಬಸವ ಜಯಂತಿ ಹಾಗೂ ಬಸವಶ್ರೀ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ ಎಂದು ಟ್ರಸ್ಟ್ ಅಧ್ಯಕ್ಷ ಕೆ.ಟಿ. ಹನುಮಂತು ತಿಳಿಸಿದ್ದಾರೆ. ಕಾರ್ಯಕ್ರಮದಲ್ಲಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಸಭಾಧ್ಯಕ್ಷೆ ಡಾ.ಮೀರಾ ಶಿವಲಿಂಗಯ್ಯ ಅಧ್ಯಕ್ಷತೆ ವಹಿಸುವರು. ಬಸವಶ್ರೀ ಪ್ರಶಸ್ತಿಯನ್ನು ಶ್ರೀ ಜಗದ್ಗುರು ಬಸವೇಶ್ವರ ಪತ್ತಿನ ಸಹಕಾರ ಸಂಘ ಅಧ್ಯಕ್ಷ ಕೆ ಎಸ್.ಷಡಕ್ಷರಿ ಅವರಿಗೆ ಪ್ರದಾನ ಮಾಡಿ ಗೌರವಿಸಲಾಗುವುದು. ವೇದಿಕೆಯಲ್ಲಿ ಟ್ರಸ್ಟ್‌ನ ಅಧ್ಯಕ್ಷ ಕೆ.ಟಿ ಹನುಮಂತು ಪ್ರಸ್ತಾವಿಕ ನುಡಿಯಲಿದ್ದಾರೆ. ಶಿಕ್ಷಣ ಇಲಾಖೆಯ ರಾಜೇಗೌಡ ಅಭಿನಂದನೆ ನುಡಿ ನುಡಿಯಲಿದ್ದಾರೆ, ಬಸವಣ್ಣ ಅವರನ್ನು ಕುರಿತು ಸಾಹಿತಿ ಭವಾನಿ ಲೋಕೇಶ್ ಮಾತನಾಡಲಿದ್ದಾರೆ. ಅತಿಥಿಗಳಾಗಿ ಜಿಲ್ಲಾ ಬಸವ ಸಮಿತಿ ಅಧ್ಯಕ್ಷ ಎಂ.ಬಿ.ರಾಜಶೇಖರ್‌ನಗರಸಭೆ ಮಾಜಿ ಅಧ್ಯಕ್ಷ ಬಿ. ಸಿದ್ದರಾಜು, ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಎಂ. ಎಸ್. ಶಿವಪ್ರಕಾಶ್, ಅಲಯನ್ಸ್ ಸಂಸ್ಥೆ 1ನೇ ಜಿಲ್ಲಾ ಉಪ ರಾಜ್ಯಪಾಲ ಕೆ.ಎಸ್.ಚಂದ್ರಶೇಖರ್ ಪಾಲ್ಗೊಳ್ಳಲಿದ್ದಾರೆ. ಪ್ರತಿಭಾಂಜಲಿ ಡೇವಿಡ್ ಮತ್ತು ತಂಡದವರಿಂದ ವಚನ ಗಾಯನ ನಡೆಯಲಿದೆ ಎಂದು ಪ್ರಕಟಣೆಯಲ್ಲಿ ತಿಳಿದ್ದಾರೆ.

ಇಂದು ಮಹಾಗಣಪತಿ ದೇವಾಲಯದ ಪುನರ್ ಪ್ರತಿಷ್ಠಾಪನಾ ಕಾರ್ಯಕ್ರಮ

ಮಳವಳ್ಳಿ: ತಾಲೂಕಿನ ಅಮೃತೇಶ್ವರನಹಳ್ಳಿ ಕಾಲೋನಿಯಲ್ಲಿ ಮೇ 4 ರಂದು ಶ್ರೀಮಹಾಗಣಪತಿ ಸೇವಾ ಸಮಿತಿ ಜೀರ್ಣೋದ್ಧಾರಗೊಳಿಸಿರುವ ಮಹಾಗಣಪತಿ ದೇವಾಲಯದ ಪುನರ್‌ಪ್ರತಿಷ್ಠಾಪನೆ ಮತ್ತು ವಿಮಾನ ಗೋಪುರ ಉದ್ಘಾಟನೆ ನಡೆಯಲಿದೆ. ಬೆಳಗಿನ ಜಾವ 4.48ಕ್ಕೆ ತೃತೀಯ ತಿಥಿ, ಅನುದಾಧ ನಕ್ಷತ್ರದ ಬ್ರಾಹ್ಮೀ ಮುಹೂರ್ತದಲ್ಲಿ ಶಿಖರ ಕಳಸ ಪ್ರತಿಷ್ಠಾಪನೆ, ಕುಂಭಾಭಿಷೇಕ, ನೇತ್ರೋನ್ಮಿಲನ, ನವಗ್ರಹ ಹೋಮ, ವಾಸ್ತು ಹೋಮ, ಪ್ರಧಾನ ಹೋಮ, ಪೂರ್ಣಾಹುತಿ, ಮಹಾ ಮಂಗಳಾರತಿ, ತೀರ್ಥಪ್ರಸಾದ ವಿನಿಯೋಗ ಕಾರ್ಯಕ್ರಮವು ಅಂಚೆದೊಡ್ಡಿಯ ಗುರುಮಠದ ಎಸ್.ನಾಗಭೂಷಣಾರಾಧ್ಯ ಅವರ ನೇತೃತ್ವದಲ್ಲಿ ನಡೆಯಲಿದೆ. ನಂತರ ಬೆಳಗ್ಗೆ 10ಗಂಟೆಗೆ ಮಹಾ ಮಂಗಳಾರತಿ, ತೀರ್ಥಪ್ರಸಾದ ವಿನಿಯೋಗದ ನಂತರ ಅನ್ನಸಂತರ್ಪಣೆ ಜರುಗಲಿದೆ. ವೇದಿಕೆ ಕಾರ್ಯಕ್ರಮದ ಸಾನ್ನಿಧ್ಯವನ್ನು ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ನಿರ್ಮಲಾನಂದನಾಥ ಸ್ವಾಮೀಜಿ ಹಾಗೂ ಡಿ.ಹಲಸಹಳ್ಳಿ ಗವಿಮಠದ ಷಡಕ್ಷರಿ ಸ್ವಾಮೀಜಿ ವಹಿಸಲಿದ್ದಾರೆ. ದೇವಾಲಯವನ್ನು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಎಚ್.ಡಿ. ಕುಮಾರಸ್ವಾಮಿ ಉದ್ಘಾಟಿಸಲಿದ್ದಾರೆ. ವಿಶೇಷ ಆಹ್ವಾನಿತರಾಗಿ ಜೆಡಿಎಸ್ ಯುವ ಘಟಕದ ರಾಜ್ಯ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ, ಮಾಜಿ ಶಾಸಕ ಕೆ.ಅನ್ನದಾನಿ, ಅತಿಥಿಗಳಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿ.ಜೆ. ಶೋಭಾರಾಣಿ, ಬಿ.ಎಂ.ಪಬ್ಲಿಕ್ ಸ್ಕೂಲ್ ಕಾರ್ಯದರ್ಶಿ ಎಂ.ರಾಮಕೃಷ್ಣ, ಜೆಡಿಎಸ್ ಮುಖಂಡ ಎಂ.ಪಿ.ಮಧು, ಕೆಎಂಎಫ್ ಮಾಜಿ ನಿರ್ದೇಶಕ ವಿ.ಎಂ.ವಿಶ್ವನಾಥ್, ಜಿಪಂ ಮಾಜಿ ಸದಸ್ಯ ಬಿ.ರವಿ ಕಂಸಾಗರ, ಪುರಸಭೆ ಮಾಜಿ ಉಪಾಧ್ಯಕ್ಷ ಟಿ.ನಂದಕುಮಾರ್ ಪಾಲ್ಗೊಳ್ಳಲಿದ್ದಾರೆ ಎಂದು ಮಹಾಗಣಪತಿ ಸೇವಾ ಸಮಿತಿಯ ಪದಾಧಿಕಾರಿಗಳು ತಿಳಿಸಿದ್ದಾರೆ.

ಕೃಷ್ಣರಾಜಸಾಗರ ಜಲಾಶಯ ನೀರಿನ ಮಟ್ಟ	
ಗರಿಷ್ಠ ಮಟ್ಟ	124.80 ಅಡಿ
ಇಂದಿನ ಮಟ್ಟ	94.08 ಅಡಿ
ಒಳಹರಿವು	79 ಕ್ಯುಸೆಕ್
ಹೊರಹರಿವು	4387 ಕ್ಯುಸೆಕ್
ನೀರಿನ ಸಂಗ್ರಹ	18.516 ಟಿಎಂಸಿ



ಮಂಡ್ಯ ವಕೀಲರ ಸಂಘದಲ್ಲಿ ಆಯೋಜಿಸಿದ್ದ ಮಾಜಿ ಸಿಎಂ ದಿ.ಎಸ್.ಎಂ.ಕೃಷ್ಣ ಸಂಸ್ಮರಣೆ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಮಾತನಾಡಿದರು. ಶಾಸಕ ಪಿ.ರವಿಕುಮಾರ್, ಮಾಜಿ ಶಾಸಕ ಎಂ.ಶ್ರೀನಿವಾಸ್, ಎಂ.ಎಸ್.ಆತ್ಮಾನಂದ ಸೇರಿದಂತೆ ಇತರರು ಇದ್ದರು.



ಶ್ರೀರಂಗಪಟ್ಟಣದಲ್ಲಿ ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಹಾಗೂ ಶೇಷಾದ್ರಿಪುರಂ ಎಂಜಿನಿಯರಿಂಗ್ ಕಾಲೇಜಿನ ಎನ್‌ಎಸ್‌ಎಸ್ ಅಧಿಕಾರಿ ಡಾ. ರಾಘವೇಂದ್ರ ಅವರು ಬಿಸಿಲಿನಿಂದ ರಕ್ಷಣೆಗಾಗಿ ವಿಶೇಷ ಚೇತನ ವ್ಯಕ್ತಿಗೆ ಕೊಡೆ (ಛತ್ರಿ) ವಿತರಿಸಿದರು.

ರಸ್ತೆ ಬದಿ ವ್ಯಾಪಾರಿಗಳಿಗೆ ಕೊಡೆ (ಛತ್ರಿ) ವಿತರಿಸಿದ ಡಾ.ರಾಘವೇಂದ್ರ

• **ಕನ್ನಡಪ್ರಭ ವಾರ್ತೆ** ಶ್ರೀರಂಗಪಟ್ಟಣ

ಪಟ್ಟಣದ ರಸ್ತೆ ಬದಿ ವ್ಯಾಪಾರಿಗಳು, ಬಿಸಿಲಿನಲ್ಲಿ ನಿಂತು ಕೆಲಸ ಮಾಡುವವರ ಹಾಗೂ ನಿರಾಶ್ರಿತರು ಬಿಸಿಲಿನಿಂದ ರಕ್ಷಣೆ ಪಡೆಯುವ ಸಲುವಾಗಿ ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಹಾಗೂ ಶೇಷಾದ್ರಿಪುರಂ ಇಂಜಿನಿಯರಿಂಗ್ ಕಾಲೇಜಿನ ಎನ್‌ಎಸ್‌ಎಸ್ ಅಧಿಕಾರಿ ಡಾ.ರಾಘವೇಂದ್ರ ಕೊಡೆ ವಿತರಿಸಿ ಮಾನವೀಯತೆ ಮೆರೆದರು.

ಬಳಿಕ ಡಾ. ರಾಘವೇಂದ್ರ ಮಾತನಾಡಿ, ರಸ್ತೆ ಬದಿ ವ್ಯಾಪಾರಿಗಳು, ಸಂಚಾರಿ ಪೊಲೀಸರು ಮತ್ತು ಕಾರ್ಮಿಕರು ಬಿಸಿಲನ್ನು ಲೆಕ್ಕಿಸದ ಕೆಲಸ ಮಾಡುತ್ತಿದ್ದಾರೆ. ಇದರಿಂದ ಅವರು ಕಾಲಕ್ರಮೇಣ ಶಾಖದ ಒತ್ತಡ, ಬಿಸಿಲಿನ ಹೊಡೆತದ ಅಪಾಯಗಳನ್ನು ಎದುರಿಸಲಿದ್ದಾರೆ. ಹಾಗಾಗಿ ಅವರ ಆರೋಗ್ಯ ರಕ್ಷಿಸಲು, ಬೇಸಿಗೆಯ ಸುಡುವ ಬಿಸಿಲಿನಲ್ಲಿ ನೆರಳು ಅತ್ಯಗತ್ಯ ಎಂದು ಅರಿತು ಅವರಿಗೆ ಕೊಡೆ ವಿತರಿಸಲಾಯಿತು ಎಂದರು.

ಈ ವೇಳೆ ಗುರುಪ್ರಸಾದ್, ವಿಹಾನ್, ಆಧ್ಯಾನ್ ಸೇರಿದಂತೆ ಇತರರು ಇದ್ದರು.

ಜೀವಧಾರೆ ಟ್ರಸ್ಟ್‌ನಿಂದ 25 ವರ್ಷದಲ್ಲಿ 50 ಸಾವಿರ ಯೂನಿಟ್ ರಕ್ತ ಸಂಗ್ರಹ

ಯುವ ಸಂಘಟನೆಗಳಿಗೆ ಟ್ರಸ್ಟ್ ಮಾದರಿ: ನಿಶ್ಚಲಾನಂದನಾಥ ಸ್ವಾಮೀಜಿ ಶ್ಲಾಘನೆ | ಹೆಣ್ಣು ಮಕ್ಕಳಿಗೆ ಕುಂಕುಮ ನೀಡಿ ಮಡಿಲು ತುಂಬುವ ಕಾರ್ಯಕ್ರಮ

• **ಕನ್ನಡಪ್ರಭ ವಾರ್ತೆ** ಮಂಡ್ಯ

ಜನರ ಅಮೂಲ್ಯ ಜೀವ ಉಳಿಸುವ ನಿಟ್ಟಿನಲ್ಲಿ ಕಳೆದ 25 ವರ್ಷಗಳಿಂದ ರಕ್ತ ಸಂಗ್ರಹದಲ್ಲಿ ದಾಖಲೆ ಮಾಡಿರುವ ಜೀವಧಾರೆ ಟ್ರಸ್ಟ್‌ನ ಸೇವೆ ಇತರೆ ಯುವ ಸಂಘಟನೆಗಳಿಗೆ ಮಾದರಿಯಾಗಿದೆ ಎಂದು ವಿಶ್ವಒಕ್ಕಲಿಗರಸಂಸ್ಥಾನಮಠದನಿಶ್ಚಲಾನಂದನಾಥ ಸ್ವಾಮೀಜಿ ಶ್ಲಾಘಿಸಿದರು.

ನೆಹರು ನಗರದ ಶಂಕರಮಠದಲ್ಲಿ ಜೀವಧಾರೆ ಟ್ರಸ್ಟ್‌ನ 25ನೇ ವರ್ಷದ ಬೆಳ್ಳಿ ಹಬ್ಬದ ಅಂಗವಾಗಿ ಜೀವಧಾರೆಕುಟುಂಬದಹೆಣ್ಣುಮಕ್ಕಳಿಗೆಕುಂಕುಮ ನೀಡಿ ಮಡಿಲು ತುಂಬುವ ಕಾರ್ಯಕ್ರಮದಲ್ಲಿ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಟ್ರಸ್ಟ್ ಇದುವರೆಗೂ ಸುಮಾರು 50 ಸಾವಿರ ಯೂನಿಟ್ ರಕ್ತ ಸಂಗ್ರಹಿಸಿರುವುದು ಸಾಮಾನ್ಯ



ವಿಚಾರವಲ್ಲ. ಸುಮಾರು 371 ಶಿಬಿರಗಳನ್ನು ರಾಜ್ಯದ 16 ಜಿಲ್ಲೆಗಳಲ್ಲಿ ಮಾತ್ರವಲ್ಲ, ದೆಹಲಿ, ಕಾಶ್ಮೀರ ಹಾಗೂ ಕೇಂದ್ರಾಡಳಿತ ಪ್ರದೇಶಗಳಲ್ಲೂ ಆಯೋಜಿಸಿ ದಾಖಲೆ ಮಾಡಿದ್ದಾರೆ ಎಂದರು.

ಜೀವಧಾರೆ ಟ್ರಸ್ಟ್‌ನ ಹಿಂದೆ ಅನೇಕ ಯುವಕರು ಶ್ರಮಿಸಿದ್ದಾರೆ. ಇವರ ಪರಿಶ್ರಮವನ್ನು ನೋಡಿ ನಾನು ಕೂಡ ರಕ್ತದಾನ ಮಾಡಿದ್ದೇನೆ. ಟ್ರಸ್ಟ್‌ನ ನಟರಾಜು ಅವರು ಹೆಣ್ಣು ಮಕ್ಕಳ ಪಡೆಯನ್ನು ರಚಿಸಿ ಜೊತೆ ಜೊತೆಗೆ ಹೆಣ್ಣು ಮಕ್ಕಳ ಸಮಸ್ಯೆ ನಿವಾರಣೆಗೂ ಸೂಕ್ತ ವೇದಿಕೆ ರಚಿಸುವಂತೆ ಸಲಹೆ ನೀಡಿದರು.

ಸಾನಿಧ್ಯ ವಹಿಸಿದ್ದ ವರ್ಚಸ್ವಿ ಸಿದ್ದಲಿಂಗರಾಜ ಅರಸ್ ಮಾತನಾಡಿ, ಇತ್ತೀಚೆಗೆ ರಸ್ತೆ ಅಪಘಾತಗಳಲ್ಲಿಸಾವನ್ನಪ್ಪುತ್ತಿರುವವರಸಂಖ್ಯೆ ಹೆಚ್ಚಾಗುತ್ತಿದೆ. ಇದಕ್ಕೆ ಕಾರಣ ಹೆಲ್ಮೆಟ್ ಧರಿಸದೆ ಅಜಾಗರೂಕತೆಯಿಂದ ಚಾಲನೆ ಮಾಡುವುದು ಹಾಗೂ ಸಂಚಾರಿ ನಿಯಮಗಳನ್ನು ಪಾಲಿಸದಿರುವುದೇ ಪ್ರಮುಖ ಕಾರಣ ಎಂದರು. ಕುಟುಂಬಗಳಿಗೆ ಆಧಾರವಾಗಿರುವವರು ಅಪಘಾತದಲ್ಲಿ ಮೃತರಾದರೆ ಆ ಕುಟುಂಬದವರನ್ನು ಸಂಕಷ್ಟಕ್ಕೆ ಸಿಲುಕಿಸಿ ತಾವು ಇಹಲೋಕದಿಂದ ನಿರ್ಗಮಿಸುತ್ತಾರೆ. ಈ ಪರಿಸ್ಥಿತಿಯನ್ನು ತಪ್ಪಿಸಲು ನಟರಾಜು ಅವರು ಜಾಗೃತಿ ಕಾರ್ಯಕ್ರಮ ನಡೆಸುವುದು ಸೂಕ್ತ ಎಂದರು.

ಬಹುತೇಕ ವಾಹನ ಚಾಲಕರು ಪೊಲೀಸರ ದಂಡಕ್ಕೆ ಹೆದರಿ ಹೆಲ್ಮೆಟ್ ಧರಿಸುತ್ತಾರೆ. ಆದರೆ, ತಮ್ಮ ಅಮೂಲ್ಯ ಜೀವ ಉಳಿಸಿಕೊಳ್ಳಬೇಕೆಂದು ಅವರು ಹೆಲ್ಮೆಟ್ ಧರಿಸುವುದಿಲ್ಲ. ಅಪಘಾತದಿಂದ ತುರ್ತು ಪರಿಸ್ಥಿತಿಯಲ್ಲಿರುವವರ ಜೀವ ರಕ್ಷಣೆಗೆ ಅತ್ಯಂತ ಅಮೂಲ್ಯವಾದ ರಕ್ತ ಸಂಗ್ರಹಿಸಿ ಕೊಡುತ್ತಿರುವ ಜೀವಧಾರೆ ಟ್ರಸ್ಟ್‌ನ ಚಾಲನಾ ಶಕ್ತಿಯಾದ ನಟರಾಜ್ ಮತ್ತು ಅವರ ತಂಡಕ್ಕೆ ಶುಭವಾಗಲಿ ಎಂದು ಹಾರೈಸಿದರು.

ಈ ವೇಳೆ ಜೀವಧಾರೆ ತಂಡದ ನಟರಾಜು, ಪ್ರಶಾಂತ್, ಶಶಿಧರ್, ಚಂದ್ರ, ಬೆಟ್ಟಪ್ಪ, ಮಧು, ಸಂತೋಷ್,ನವೀನ್,ವಿನಯ್,ಎಂ.ಬಿ.ರಮೇಶ್ ಮತ್ತಿತರರು ಪಾಲ್ಗೊಂಡಿದ್ದರು.

ಅದ್ಭುತ ಆಡಳಿತಗಾರ ಎಸ್.ಎಂ.ಕೃಷ್ಣ

ಸಿಲಿಕಾನ್ ಸಿಟಿಯನ್ನು ವಿಶ್ವದ ಗಮನ ಸೆಳೆಯುವಂತೆ ಮಾಡಿದ ನಾಯಕ: ಎನ್.ಚಲುವರಾಯಸ್ವಾಮಿ

• **ಕನ್ನಡಪ್ರಭ ವಾರ್ತೆ** ಮಂಡ್ಯ

ಮಾಜಿ ಮುಖ್ಯಮಂತ್ರಿ ದಿ.ಎಸ್.ಎಂ. ಕೃಷ್ಣ ಅವರು ಬೆಂಗಳೂರಿನಲ್ಲಿ ಐಟಿ-ಬಿಟಿ ಕಂಪನಿಗಳನ್ನು ಸ್ಥಾಪಿಸುವ ಮೂಲಕ ಸಿಲಿಕಾನ್ ಸಿಟಿಯನ್ನು ವಿಶ್ವದಲ್ಲೇ ಗಮನ ಸೆಳೆಯುವಂತೆಮಾಡಿದಅದ್ಭುತಆಡಳಿತಗಾರ ಎಂದು ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಬಣ್ಣಿಸಿದರು.

ನಗರದಲ್ಲಿ ವಕೀಲರ ಸಂಘದಿಂದ ಜಂಟಲ್‌ಮನ್ ರಾಜಕಾರಣಿ ಕೃಷ್ಣ ಸಂಸ್ಮರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಜಿಲ್ಲೆಯವರೇ ಆದ ಎಸ್.ಎಂ. ಕೃಷ್ಣರು ರಾಜ್ಯದ ಮುಖ್ಯಮಂತ್ರಿಯಾಗಿ ಒಳ್ಳೆಯ ಆಡಳಿತ ನೀಡಿದರಾದರೂ ಮಂಡ್ಯದ ಅಭಿವೃದ್ಧಿಗೆ ಸರಿಯಾದ ರೀತಿಯಲ್ಲಿ ಸ್ಥಳೀಯ ರಾಜಕಾರಣಿಗಳು ಬಳಸಿಕೊಳ್ಳಲಿಲ್ಲ ಎಂದು ವಿಷಾದಿಸಿದರು.

ತಮ್ಮ ಅಧಿಕಾರದ ಅವಧಿಯಲ್ಲಿ ರಾಜ್ಯದಲ್ಲಿ ಎದುರಾದ ಸತತ ನಾಲ್ಕು ವರ್ಷಗಳ ಕಾಲ ತೀವ್ರ ಬರಗಾಲ, ಕಾವೇರಿ ನೀರಿನ ಸಮಸ್ಯೆ, ಹೋರಾಟ, ವೀರಪ್ಪನ್‌ನಿಂದ ನಟ ಡಾ.ರಾಜ್ ಕುಮಾರ್‌ಅವರ ಅಪಹರಣ ಪ್ರಕರಣದಂತಹ ಹಲವು



ಮಂಡ್ಯ ವಕೀಲರ ಸಂಘದಲ್ಲಿ ಆಯೋಜಿಸಿದ್ದ ಮಾಜಿ ಸಿಎಂ ದಿ.ಎಸ್.ಎಂ.ಕೃಷ್ಣ ಸಂಸ್ಮರಣೆ ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಎಂ.ಶ್ರೀನಿವಾಸ್ ಅವರನ್ನು ಅಭಿನಂದಿಸಲಾಯಿತು.

ಕಠಿಣ ಸವಾಲು ಎದುರಿಸಿದ ನಾಯಕ ಎಂದರು. ಎಸ್.ಎಂ.ಕೃಷ್ಣರು ಒಂದು ರೀತಿಯಲ್ಲಿ ಸ್ಟೈಲಿಶ್ ರಾಜಕಾರಣಿ. ಶಿಸ್ತುಬದ್ಧ ಜೀವನವನ್ನು ನಡೆಸಿದವರು. ಮೈಸೂರು-ಬೆಂಗಳೂರು ರಸ್ತೆಯನ್ನು ಚತುಷ್ಪತ ರಸ್ತೆಯನ್ನಾಗಿ ಅಭಿವೃದ್ಧಿಪಡಿಸಿದರು. ಕೆಂಗಲ್ ಹನುಮಂತಯ್ಯ ಅವರು ವಿಧಾನ ಸೌಧ ನಿರ್ಮಾಣ ಮಾಡಿದರೆ, ಅದರ ಪಕ್ಕದಲ್ಲಿಯೇ ಎಸ್.ಎಂ.ಕೃಷ್ಣ ಅವರು ವಿಕಾಸ ಸೌಧ ನಿರ್ಮಿಸಿ ಮಾದರಿಯಾದರು. ದೂರದೃಷ್ಟಿಯುಳ್ಳ ಚಿಂತಕರಾಗಿದ್ದರು ಎಂದು ಬಣ್ಣಿಸಿದರು.

ವಿಧಾನ ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಮಾತನಾಡಿ, ರಾಜಕೀಯದಲ್ಲಿ ಸಾಕ್ಷಿಗುಡ್ಡೆ ಬಿಟ್ಟು ಹೋದ ಎಸ್.ಎಂ.ಕೃಷ್ಣ ಅವರು ಅಂತಾರಾಷ್ಟ್ರೀಯ ಕಂಪನಿಗಳಿಗೆ ಹೆಚ್ಚು ಒತ್ತು ನೀಡಿ ರಾಜ್ಯದ ಅಭಿವೃದ್ಧಿಗೆ ಶ್ರಮಿಸಿದರು. ಸಿಎಂ ಆಗಿ ರಾಜ್ಯದ ಬಜೆಟ್ ಗಾತ್ರವನ್ನು ಹೆಚ್ಚಿಸಿ ಅಭಿವೃದ್ಧಿಗೆ ನಾಂದಿಯಾಡಿದ ಮಹಾನ್ ನಾಯಕ ಎಂದು ಶ್ಲಾಘಿಸಿದರು.

ಮೈಸೂರಿನ ರಾಮಕೃಷ್ಣ ಆಶ್ರಮ ಅಧ್ಯಕ್ಷ ಮುಕ್ತಿದಾನಂದ ಮಹಾರಾಜ್ ಸ್ವಾಮೀಜಿ ಮಾತನಾಡಿ, ಎಸ್.ಎಂ.ಕೃಷ್ಣ ಅವರು ಯಾವ ಪರಿಸ್ಥಿತಿಯಲ್ಲಿಯೂ ಯಾವುದೇ ಒತ್ತಡಕ್ಕೆ ಒಳಗಾಗದೆ ಸಹಜವಾಗಿಯೇ ಕೆಲಸ ನಿರ್ವಹಿಸುತ್ತಿದ್ದರು. ಅವರ ವ್ಯಕ್ತಿತ್ವ ಈಗಿನ ರಾಜಕಾರಣಿಗಳಿಗೆ ಅವಶ್ಯವಾಗಿ ಬೇಕಿದೆ ಎಂದರು.

ಶಾಸಕ ಪಿ.ರವಿಕುಮಾರ್‌ಮಾತನಾಡಿ, ಹತ್ತಿರದಿಂದ ನಾನು ಎಸ್.ಎಂ.ಕೃಷ್ಣರನ್ನು ನೋಡಿಲ್ಲ. ಆದರೆ, ರಾಜಕಾರಣದಲ್ಲಿ ಉನ್ನತ ಹುದ್ದೆ ಪಡೆದವರು. ಮುಖ್ಯಮಂತ್ರಿ ಸ್ಥಾನದಿಂದ ವಿದೇಶಾಂಗ ಸಚಿವ ಸ್ಥಾನದವರೆಗೂ ಉತ್ತಮ ಕೆಲಸ ಮಾಡಿದರು. ರಾಜಧಾನಿ ಬೆಂಗಳೂರಿಗೆ ಕೊಟ್ಟಂತಹ ಕೊಡುಗೆ ಅಪಾರ ಎಂದರು.

ಇದೇ ವೇಳೆ ಮಾಜಿ ಶಾಸಕ ಹಾಗೂ ಹಿರಿಯ ವಕೀಲ ಎಂ.ಶ್ರೀನಿವಾಸ್ ಅವರನ್ನು ರಾಜ್ಯ ಒಕ್ಕಲಿಗರ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ.ಎಸ್.ಆತ್ಮಾನಂದ ಅಭಿನಂದಿಸಿದರು. ವಕೀಲರ ಸಂಘದ ಜಿಲ್ಲಾಧ್ಯಕ್ಷ ಟಿ.ಎಸ್.ಸತ್ಯಾನಂದ ಅಧ್ಯಕ್ಷತೆ ವಹಿಸಿದ್ದರು. ಸಮಾರಂಭದಲ್ಲಿ ಮುಖಂಡರಾದ ಎಚ್.ಎನ್.ಯೋಗೇಶ್, ಚಲುವರಾಜು, ಜೋಗೀಗೌಡ, ವಕೀಲರ ಸಂಘದ ಕಾರ್ಯದರ್ಶಿ ಸತೀಶ್ ಸೇರಿದಂತೆ ಇತರರು ಇದ್ದರು.

ಬಸವ, ಅಂಬೇಡ್ಕರ್ ಜಯಂತಿ



• **ಕನ್ನಡಪ್ರಭ ವಾರ್ತೆ** ಕೆ.ಆರ್.ಪೇಟೆ

ಬುದ್ಧನ ಪ್ರೀತಿ, ಬಸವಣ್ಣನ ಸಮಾನತೆ ಹಾಗೂಅಂಬೇಡ್ಕರ್‌ರಚಿಸಿದಸಂವಿಧಾನದ ಬಲದಿಂದ ಜಾತಿ, ಮತ, ಪಂಥಗಳಿಂದ ಮುಕ್ತ ಸಮ ಸಮಾಜ ನಿರ್ಮಾಣ ಸಾಧ್ಯ ಎಂದು ಪಟ್ಟಣದ ಜೆಎಂಎಫ್‌ಸಿ ಹಿರಿಯ ಶ್ರೇಣಿ ನ್ಯಾಯಾಲಯದ ನ್ಯಾಯಾಧೀಶರಾದ ಸುಧೀರ್‌ಹೇಳಿದರು.

ಪಟ್ಟಣದ ಜೆಎಂಎಫ್‌ಸಿ ಸಿವಿಲ್ ನ್ಯಾಯಾಲಯದ ಆವರಣದಲ್ಲಿ ವಕೀಲರ ಸಂಘದಿಂದ ಆಯೋಜಿಸಿದ್ದ ಬಸವ ಜಯಂತಿ ಹಾಗೂ ಅಂಬೇಡ್ಕರ್‌ಜಯಂತಿಯನ್ನು ಉದ್ಘಾಟಿಸಿ ಮಾತನಾಡಿ, ಯುವ ಜನರು ಹಾಗೂ ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಪ್ರಜ್ಞೆ ಹಾಗೂ ವೈಜ್ಞಾನಿಕ ಮನೋಭಾವನೆ ಮೂಡಿಸಿ ಅಸಮಾನತೆಗಳನ್ನು ಹೊಡೆದೋಡಿಸಿದಾಗ ಸಮಸಮಾಜ ನಿರ್ಮಾಣ ಸಾಧ್ಯವಾಗಲಿದೆ ಎಂದರು.

ಬಸವಣ್ಣನವರ ವಿಚಾರಗಳ ಮಂಥನದಿಂದ ಜ್ಞಾನವನ್ನು ಹೆಚ್ಚಿಸಿಕೊಳ್ಳಬಹುದು. ವಚನಗಳ ಸಾರ ಹಾಗೂ ಅಂಬೇಡ್ಕರ್‌ವಿಚಾರಧಾರೆ ಅರಿತು ಹೆಜ್ಜೆ ಹಾಕಿದರೆ ಆರೋಗ್ಯವಂತ ಸಮಾಜ, ನೈತಿಕ ಮೌಲ್ಯಗಳನ್ನು ಉಳಿಸಿ ಬೆಳೆಸಬಹುದು ಎಂದರು.

ಸಾಮಾಜಿಕ ಹೋರಾಟಗಾರ ಪ್ರೊ. ಹುಲ್ಲುಕೆರೆ ಮಹದೇವ ಮಾತನಾಡಿ, ಬುದ್ಧ- ಬಸವ- ಅಂಬೇಡ್ಕರ್‌ಅವರ ತತ್ವ, ಚಿಂತನೆಗಳು ಸಾರ್ವಕಾಲಿಕ ಸತ್ಯವಾಗಿವೆ. ವಿದ್ಯಾರ್ಥಿಗಳು ಹಾಗೂ ಯುವ ಜನರು ಸಾಮಾಜಿಕ ಕಟ್ಟುಪಾಡುಗಳು ಹಾಗೂ ಮೌಢ್ಯಗಳ ನಿರ್ಮೂಲನೆಗೆ ಸಂಘಟಿತ ಹೋರಾಟ ಮಾಡಬೇಕು ಎಂದರು.

ಅಪರ ಸಿವಿಲ್ ನ್ಯಾಯಾಧೀಶರಾದ ದೇವರಾಜು ಮಾತನಾಡಿ, ಡಾ.ಬಿ.ಆರ್. ಅಂಬೇಡ್ಕರ್‌ಅವರ ದೂರದೃಷ್ಟಿ ಫಲವೇ ನಮಗೆ ಕೊಡುಗೆಯಾಗಿ ದೊರಕಿರುವ ಸಂವಿಧಾನ. ಇದರಿಂದ ಶೋಷಿತರು, ಹಿಂದುಳಿದ ವರ್ಗಗಳ ಜನರು ಸೇರಿದಂತೆ ಪರಿಶಿಷ್ಟ ಜಾತಿ, ವರ್ಗಗಳ ಜನರಿಗೆ ನ್ಯಾಯಬದ್ಧ ಸೌಲಭ್ಯಗಳು ಹಾಗೂ ಕಾನೂನುಗಳು ಸಿಗುತ್ತಿವೆ ಎಂದು ಹೇಳಿದರು.

ಅಪರ ಸಿವಿಲ್ ನ್ಯಾಯಾಧೀಶರಾದ ಕೆ.ವಿ.ಅರ್ಪಿತಾ, ವಿ.ಪಾರ್ವತಿ, ಹಿರಿಯ ವಕೀಲರಾದ ಬಿ.ಎಲ್.ದೇವರಾಜು, ಜಿ. ಆರ್. ಅನಂತರಾಮಯ್ಯ, ಕೆ.ಎನ್. ನಾಗರಾಜು, ಸಹಾಯಕ ಸರ್ಕಾರಿ ಅಭಿಯೋಜಕರಾದ ನಂಜುಂಡಸ್ವಾಮಿ, ಹರೀಶ್, ವೀಣಾ, ಶಿರಸ್ತೇದಾರರಾದ ಪ್ರಕಾಶ್, ಗೌಡಣ್ಣ, ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ಮಂಜೇಗೌಡ, ಉಪಾಧ್ಯಕ್ಷ ಪುರುಷೋತ್ತಮ್, ಜಂಟಿ ಕಾರ್ಯದರ್ಶಿ ದೊಡ್ಡಯ್ಯ, ಕಾರ್ಯಕ್ರಮದ ಆಯೋಜಕರಾದ ಗಂಜಿಗೆರೆ ಲೋಕೇಶ್, ಶೀಳನೆರೆ ರಘು, ಅವಿನಾಶ್, ಹಿರಿಯ ವಕೀಲರಾದ ಬಿ.ಸಿ.ದಿನೇಶ್, ಎನ್.ಆರ್.ರವಿಶಂಕರ್, ಸಿ.ಎನ್.ಮೋಹನ್, ಎಚ್.ರವಿ, ಎಸ್. ಡಿ.ಸರೋಜಮ್ಮ, ಪುರ ಮಂಜುನಾಥ್ ನೂರಾರು ವಕೀಲರು ಭಾಗವಹಿಸಿದ್ದರು.

ವಿದ್ಯುತ್ ದೀಪಾಲಂಕಾರಕ್ಕೆ ಶಾಸಕ ಕೆ.ಎಂ.ಉದಯ್ ಚಾಲನೆ

• **ಕನ್ನಡಪ್ರಭ ವಾರ್ತೆ** ಮದ್ದೂರು

ಮದ್ದೂರು ಉತ್ಸವದ ಅಂಗವಾಗಿ ಪಟ್ಟಣಾದ್ಯಂತವಿದ್ಯುತ್ ದೀಪಾಲಂಕಾರ ವ್ಯವಸ್ಥೆಗೆ ಶಾಸಕ ಕೆ.ಎಂ.ಉದಯ್ ಶನಿವಾರ ಸಂಜೆ ಚಾಲನೆ ನೀಡಿದರು.

ಪಟ್ಟಣದ ಪ್ರವಾಸಿ ಮಂದಿರ ನಾಲ್ವಡಿ ಕೃಷ್ಣರಾಜ ಒಡೆಯರ್‌ವೃತ್ತದಲ್ಲಿ ಶ್ರೀಮದ್ದೂರಮ್ಮನ ಜಾತ್ರೆ ಮತ್ತು ಶ್ರೀನರಸಿಂಹ ಸ್ವಾಮಿ ಬ್ರಹ್ಮ ರಥೋತ್ಸವದ ಅಂಗವಾಗಿ ಉತ್ಸವವನ್ನು ಜನತೆ ಅರ್ಥಪೂರ್ಣವಾಗಿ ಆಚರಿಸಬೇಕೆಂಬ ಉದ್ದೇಶದಿಂದ ಸಾಂಸ್ಕೃತಿಕ ನಗರಿ ಮೈಸೂರು ಮಾದರಿಯಲ್ಲಿ 25



ಲಕ್ಷ ರು. ವೆಚ್ಚದಲ್ಲಿ ವಿಶೇಷ ದೀಪಾಲಂಕಾರ ಚಾಲನೆ ನೀಡಲಾಗಿದೆ ಎಂದರು.

ಕಳೆದ ಬಾರಿ ಉತ್ಸವವನ್ನು ಅದ್ಧೂರಿಯಾಗಿ ಆಚರಣೆ ಮಾಡಬೇಕೆಂಬ ಉದ್ದೇಶವಿತ್ತು. ಸಮಯದ ಅಭಾವದಿಂದ ಆಚರಣೆ ಸಾಧ್ಯವಾಗಿಲ್ಲ. ಈ ಬಾರಿ ಉತ್ಸವವನ್ನು ದಸರಾ ಮಾದರಿಯಾಗಿ ಜನತೆಗೆ ಅನುಭವ ನೀಡಬೇಕೆಂಬ ಹಂಬಲದಿಂದ ದೀಪಾಲಂಕಾರವನ್ನು ಎಂಟು ದಿನಗಳ ಕಾಲ ವ್ಯವಸ್ಥೆ ಮಾಡಲಾಗಿದೆ ಎಂದರು.

ಈ ವೇಳೆ ಜಿಲ್ಲಾಧಿಕಾರಿ ಡಾ. ಕುಮಾರ್, ನಗರಸಭಾ ಆಯುಕ್ತೆ ರಾಧಿಕಾ ಸೋಮಶೇಖರ್, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಚೆಲುವರಾಜು, ನಿರ್ದೇಶಕ ಪಿ.ಸಂದರ್ಶ, ಮನ್ಮುಲ್ ನಿರ್ದೇಶಕ ಹರೀಶ್ ಬಾಬು, ಕಾಂಗ್ರೆಸ್ ಮಹಿಳಾ ಘಟಕದಅಧ್ಯಕ್ಷಮಮತಾಶಂಕರೇಗೌಡ, ಗ್ರೇಡ್2ತಹಸೀಲ್ದಾರ್‌ಸೋಮಶೇಖರ್, ಪುರಸಭೆ ಉಪಾಧ್ಯಕ್ಷ ಟಿ.ಆರ್. ಪ್ರಸನ್ನ ಕುಮಾರ್, ಮಾಜಿ ಸದಸ್ಯ ಸಿದ್ದರಾಜು, ಮಾಜಿ ಯೋಧ ಸಿಪಾಯಿ ಶ್ರೀನಿವಾಸ್ ಮತ್ತಿತರರು ಇದ್ದರು.

7ರಂದು ಜನರೊಂದಿಗೆ ಜನತಾದಳ: ಜೆಡಿಎಸ್ ಬೆಳ್ಳಿ ಹಬ್ಬ ಕಾರ್ಯಕ್ರಮ

ಸಿ.ಪಿ.ಶಿವರಾಜು ನೇತೃತ್ವದಲ್ಲಿ ಕಾರ್ಯಕರ್ತರ ಸಭೆ



• **ಕನ್ನಡಪ್ರಭ ವಾರ್ತೆ** ಪಾಂಡವಪುರ

ಪಟ್ಟಣದಲ್ಲಿ ಮೇ 7ರಂದು ನಡೆಯಲಿರುವ ಜನರೊಂದಿಗೆ ಜನತಾದಳ ಹಾಗೂ ಜೆಡಿಎಸ್ ಪಕ್ಷದ 25ನೇ ವರ್ಷದ ಬೆಳ್ಳಿಹಬ್ಬದ ಕಾರ್ಯಕ್ರಮ ಹಿನ್ನೆಲೆ ಯುವನಾಯಕ ಸಿ.ಪಿ.ಶಿವರಾಜ್ ಅವರು ತಾಲೂಕಿನ ಕನಗನಮರಡಿ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಪಕ್ಷದ ಕಾರ್ಯಕರ್ತರ ಸಭೆ ನಡೆಸಿದರು.

ಗ್ರಾಮದ ಶ್ರೀಅಂಕನಾಥೇಶ್ವರ ದೇವಸ್ಥಾನದ ಬಳಿ ಸಭೆ ನಡೆಸಿದ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಪುತ್ರ ಸಿ.ಪಿ.ಶಿವರಾಜು ಪಟ್ಟಣದಲ್ಲಿ ನಡೆಯುವ ಬೃಹತ್ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕರ್ತರು ಆಗಮಿಸಬೇಕೆಂದು ಮನವಿ ಮಾಡಿದರು.

ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಹಾಗೂ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ನೇತೃತ್ವದಲ್ಲಿ ಜನರೊಂದಿಗೆ ಜನತಾದಳ ಹಾಗೂ ಜೆಡಿಎಸ್ ಪಕ್ಷದ 25ನೇ ವರ್ಷದ ಬೆಳ್ಳಿ ಹಬ್ಬದ ಕಾರ್ಯಕ್ರಮಕ್ಕೆ ಪಾಂಡವ ಕ್ರೀಡಾಂಗಣದ ಮುಂಭಾಗ ಬೃಹತ್ ವೇದಿಕೆ ನಿರ್ಮಿಸಲಾಗಿದೆ ಎಂದರು.

ಕಾರ್ಯಕ್ರಮದ ಅಂಗವಾಗಿ ಅಂದು ಬೆಳಗ್ಗೆ 10 ಗಂಟೆಗೆ ಪಟ್ಟಣದ ಮಂಡ್ಯ ಸರ್ಕಲ್‌ನಿಂದ ತೆರದ ವಾಹನದಲ್ಲಿ ಅದ್ಧೂರಿ ಮೆರವಣಿಗೆ ನಡೆಸುವ ಮೂಲಕ ವೇದಿಕೆಗೆ ಕರೆತರಲಾಗುವುದು, ಬಿಸಿಲು ಜೋರಾಗಿರುವುದರಿಂದ ಬೆಳಗ್ಗೆ ಸರಿಯಾದ ಸಮಯಕ್ಕೆ ಕಾರ್ಯಕ್ರಮ ಆರಂಭಿಸಿ ಬೇಗನೆ ಮುಕ್ತಾಯ ಮಾಡಲಾಗುವುದು ಎಂದರು.

ಇದೇ ವೇಳೆ ಎಲ್ಲಾ ಮುಖಂಡರು ಯುವನಾಯಕ ಸಿ.ಪಿ.ಶಿವರಾಜು ಹಾಗೂ ಚಿಕ್ಕಾಡೆ ಚೇತನ್ ಅವರನ್ನು ಗ್ರಾಮಸ್ಥರು ಅಭಿನಂಧಿಸಿದರು. ಸಭೆಯಲ್ಲಿ ಕನಗನಮರಡಿ ಗ್ರಾಪಂ ವ್ಯಾಪ್ತಿಯ ಎಲ್ಲಾ ಜೆಡಿಎಸ್ ಪಕ್ಷದ ಮುಖಂಡರು, ಕಾರ್ಯಕರ್ತರು ಹಾಜರಿದ್ದರು.

ಸರ್ವಧರ್ಮ ಸಭೆ | ಚಿಕ್ಕಮಗಳೂರಿನ ಜಯಬಸವಾನಂದ ಸ್ವಾಮೀಜಿ ಅಭಿಪ್ರಾಯ

ಟ್ರಂಪ್ ಭಯೋತ್ಪಾದಕನಂತೆ ಕಾಡುತ್ತಿದ್ದಾನೆ

• **ಕನ್ನಡಪ್ರಭ ವಾರ್ತೆ** ಕಿಕ್ಕೇರಿ

ಯುದ್ಧ ಬೇಡ ಶಾಂತಿ ಬೇಕು ಎಂದು ಹಪಹಪಿಸುತ್ತಿರುವ ರಾಷ್ಟ್ರಗಳಿಗೆಶಾಪವಾಗಿರುವಟ್ರಂಪ್ ಭಯೋತ್ಪಾದಕನಂತೆ ಕಾಡುತ್ತಿದ್ದಾನೆ ಎಂದು ಚಿಕ್ಕಮಗಳೂರು ಬಸವ ತತ್ವಪೀಠದ ಜಯ ಬಸವಾನಂದ ಸ್ವಾಮೀಜಿ ಹೇಳಿದರು.

ಸಮೀಪದ ಮಂದಗೆರೆಯ ಹೊನ್ನೇನಹಳ್ಳಿ ಕ್ರಾಸ್ ಬಳಿ ಭಾನುವಾರ ರಾಜ್ಯ ರೈತ ಸಂಘ ಹಸಿರು ಸೇನೆ, ಹಜರತ್ ಖ್ವಾಜಾ ಷಾ ಮೆಹಬೂಬ್ ಅಲ್ಲಾ ಷಾ ಬೆಸ್ತಿ ಉಲ್ ಖಾದರಿ ಅಲ್ ಹುಸೇನಿ ಸಹಯೋಗದಲ್ಲಿ ಜರುಗಿದ ಸರ್ವಧರ್ಮಸಭೆ ಹಾಗೂ ಗೌಸ್ ಆಜಾಮ್ ದೀಪೋತ್ಸವದಲ್ಲಿ ಆಶೀರ್ವಚನ ನುಡಿದರು.

ಜಗತ್ತಿನ ಎಲ್ಲ ಧರ್ಮಗಳು ಬಯಸುವುದು ಶಾಂತಿ. ದುಡ್ಡಿಗಾಗಿ ಅನ್ಯರಾಷ್ಟ್ರವಾದರೆ, ಶಾಂತಿ, ನೆಮ್ಮದಿಗಾಗಿ ಭಾರತವಾಗಿದೆ. ಅನುಕೂಲಕ್ಕಾಗಿ ಧರ್ಮ, ಜಾತಿ ಸಂಪ್ರದಾಯಗಳಿವೆ. ಪ್ರಜಾಪ್ರಭುತ್ವದಲ್ಲಿ ರಾಜಕಾರಣಿಗಳ ಭ್ರಷ್ಟಾಚಾರದಿಂದ ಎಲ್ಲವೂ ಕಲುಷಿತವಾಗುತ್ತಿದೆ ಎಂದರು.

ದೇಶವನ್ನು ಸಾಲಗಾರರಾಗಿ ಮಾಡುತ್ತಿರುವ ರಾಜಕಾರಣಿಗಳಿಂದ ಸರ್ವಧರ್ಮಗಳು ದ್ವೇಷ, ದ್ವಂದ್ವದ ವಸ್ತುವಾಗಿ ದುರ್ಬಳಕೆಯಾಗುತ್ತಿದೆ. ದೇಶದ ಶಾಂತಿಭಂಗವಾಗಿಸಲು ಹೊರರಾಷ್ಟ್ರಗಳು ಮಾದಕ ವಸ್ತುಗಳನ್ನು ದೇಶಕ್ಕೆ ನುಸುಳಿಸುತ್ತಿದೆ. ಹೀಗಾಗಿ ಯುವಶಕ್ತಿ ಜಾಗೃತರಾಗಬೇಕು



ಎಂದು ಕರೆ ನೀಡಿದರು. ಯುದ್ಧದಿಂದ ಭಯೋತ್ಪಾದನೆ ಶಮನವಾಗದೆ ದಿವಾಳಿ ಮಾಡಲಿವೆ. ನಮ್ಮ ದೇಶದ ಅನ್ನ, ನೀರು, ಗಾಳಿ, ಸಮಾಜ ಕಲುಷಿತವಾಗಬಾರದು. ಬಡ್ಡಿ ವ್ಯವಹಾರ ಬಿಟ್ಟು ಗಳಿಸಿದ ಹಣದಾನ, ಧರ್ಮಕ್ಕೆ ಮೀಸಲಿಡಿ. ಸರ್ವ ಧರ್ಮ ಪ್ರೀತಿಸುವ, ಆಚಾರ ವಿಚಾರಗಳನ್ನು ಪಾಲಿಸಲು ಕಾಯಕ ನಿಷ್ಠೆ ಮರೆಯದಿರಿ ಎಂದರು.

ರಾಜ್ಯ ರೈತ ಸಂಘ ಹಸಿರು ಸೇನೆ ರಾಜ್ಯಾಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ್ ಮಾತನಾಡಿದರು.

ಕಾರ್ಯಕ್ರಮದಲ್ಲಿ ಹಾಸನ ಎಂ.ಎಸ್ ಸಂಸ್ಥೆಯ ಧರ್ಮಗುರು ಶ್ರೀನಿವಾಸಮೂರ್ತಿ, ಬೆಸ್ತಿ ಉಲ್ ಖಾದರಿ ಅಲ್ ಹುಸೇನಿ, ಆನೆಕೆರೆ ರವಿ, ದಬ್ಬೇಘಟ್ಟ ರಾಜಣ್ಣ, ಪಾಂಡು, ರಮೇಶ್, ಕೆ.ಆರ್. ನೀಲಕಂಠ, ಗಂಗಾಧರ್, ಅಕ್ಮಲ್ ಪಾಷ, ಜಯರಾಂ, ಕಾಂತರಾಜು, ದಾಸೇಗೌಡ, ಕಮಲಮ್ಮ, ಕಾಳಮ್ಮ, ಪವಿತ್ರ ಭಾಗವಹಿಸಿದ್ದರು.

ಬುದ್ಧ ಜಯಂತಿ | ಯಾಚೇನಹಳ್ಳಿ ಆಶ್ರಮದ ನಾದಾನಂದ ಸ್ವಾಮೀಜಿ ಸಲಹೆ

ಮಕ್ಕಳಿಗೆ ಬುದ್ಧನ ಜೀವನ, ಸಾಧನೆ ತಿಳಿಸಿ


• **ಕನ್ನಡಪ್ರಭ ವಾರ್ತೆ** ಶ್ರೀರಂಗಪಟ್ಟಣ

ಪ್ರಪಂಚದ ಎಲ್ಲ ಸಮಸ್ಯೆಗಳಿಗೂ ಬುದ್ಧ ಮಾರ್ಗ ಒಂದೇ ಪರಿಹಾರ. ಮಕ್ಕಳಿಗೆ ಬುದ್ಧನ ಜೀವನ ಸಾಧನೆ ಪರಿಚಯಿಸುವುದರಿಂದಸಮಾಜಕ್ಕೆ ಒಳಿತಾಗುತ್ತದೆ ಎಂದು ಯಾಚೇನಹಳ್ಳಿ ಆಶ್ರಮದ ನಾದಾನಂದ ಸ್ವಾಮೀಜಿ ಸಲಹೆ ನೀಡಿದರು.

ತಾಲೂಕಿನ ನೇರಲಕೆರೆ ಗ್ರಾಮದ ಬುದ್ಧ ಭಾರತ ಫೌಂಡೇಶನ್‌ನ ಬುದ್ಧ ಮಂದಿರದಲ್ಲಿ ಆಯೋಜಿಸಿದ್ದ ಬುದ್ಧ ಜಯಂತಿಯಲ್ಲಿ ಬುದ್ಧನ ಪ್ರತಿಮೆಗೆ ಪುಷ್ಪಾರ್ಚನೆ ಮಾಡಿ, ವೈಜ್ಞಾನಿಕವಾದ ಬದುಕನ್ನು ತಿಳಿಸಿದ ಬುದ್ಧನು ಮಾನವನ ಆಸೆಯೇ ದುಃಖಕ್ಕೆ ಮೂಲ ಎಂಬುದನ್ನು ಪ್ರಪಂಚಕ್ಕೆ ಸಾರಿದರು ಎಂದರು.

ಮನುಷ್ಯನಲ್ಲಿರುವ ಆಸೆಗಳು ಅತಿಯಾಸೆಯಾಗಿ ಮಾರ್ಪಟ್ಟು ಪ್ರಪಂಚದಲ್ಲಿ ಯುದ್ಧಭೀತಿ ನಡುವೆ ಮಾನವ ಒದ್ದಾಡುವಂತಾಗಿದೆ. ಪರಿಣಾಮ ಮನೆಗಳಲ್ಲಿ ಮತ್ತೆ ಸೌದೆ ಒಲೆಗಳು ಕಾಣುವಂತಾಗಿದೆ. ತಿನ್ನುವ ಆಹಾರವು ವಿಷವಾಗುತ್ತಿರುವ ಈ ದಿನಗಳಲ್ಲಿ ಕೃಷಿ ಸಂಸ್ಕೃತಿ ವಿಜೃಂಭಿಸಿದರೆ ಮಾತ್ರ ಶಾಂತಿ ನೆಲೆಸಲು ಸಾಧ್ಯ ಎಂದರು.

ಹೋಮ ಯಜ್ಞಾಧಿಗಳಿಂದ ಯಾವುದೇ ಸಮಸ್ಯೆ ಬಗೆಹರಿಯುವುದಿಲ್ಲ. ಮಳೆಯೂ ಬರುವುದಿಲ್ಲ. ವೈದಿಕ ಶಾಹಿ ವರ್ಣ ವ್ಯವಸ್ಥೆಯಿಂದ ಸಮಾಜ ಜಾತಿ ಸಂಕೋಲೆಗೆ ಸಿಲುಕಿದೆ. ಇದರಿಂದ ಹೊರಬರಲು ಬುದ್ಧನ ಮಾರ್ಗ



ಅನುಸರಿಸಬೇಕಿದೆ ಎಂದರು.

ಬುದ್ಧ ಭಾರತ ಫೌಂಡೇಶನ್ ಅಧ್ಯಕ್ಷ ಜಯರಾಮಯ್ಯ ಮಾತನಾಡಿ, ನೇರಳೆಕೆರೆಯಂತಹ ಗ್ರಾಮದಲ್ಲಿ ಭವಿಷ್ಯದ ಪ್ರಜೆಗಳನ್ನು ಉತ್ತಮವಾಗಿ ರೂಪಿಸಬೇಕೆಂಬ ಆಶಯದಿಂದ ಈ ಒಂದು ಜ್ಞಾನ ಮಂದಿರವನ್ನು ನಿರ್ಮಿಸಿದ್ದಾರೆ. ಇದನ್ನು ಎಲ್ಲರೂ ಸದುಪಯೋಗಪಡಿಸಿಕೊಳ್ಳಬೇಕೆಂದರು. ಮಂಡ್ಯದ ಎಲ್ಲರೊಳಗೊಂದಾಗು ಮಂಕುತಿಮ್ಮ ಟ್ರಸ್ಟ್‌ನ ಅಧ್ಯಕ್ಷ ವಿನಯ್‌ಕುಮಾರ್‌ಮಾತನಾಡಿ, 2500 ವರ್ಷಗಳ ಹಿಂದೆ ಇಡೀ ಪ್ರಪಂಚಕ್ಕೆ ದೊಡ್ಡ ಸಂದೇಶ ನೀಡಿದ ಭಗವಾನ್ ಬುದ್ಧರು ಸಮಾಜದಲ್ಲಿರುವ ರೋಗ, ವೃದ್ಧಾಪ್ಯ, ಸಾವು, ನೋವುಗಳ ಬಗ್ಗೆ ಚಿಂತಿಸಿ ದುಃಖ ನಿವಾರಣೆಗೆ ಅಷ್ಟಾಂಗ ಮಾರ್ಗಗಳನ್ನು ತಿಳಿಸಿಕೊಟ್ಟರು ಎಂದರು.

ತಾಪಂ ಮಾಜಿ ಸದಸ್ಯ ಸತೀಶ್, ಎಸ್.ಕೆ.ರಾಜುಗೌಡ, ನವೋದಯ ವಿದ್ಯಾಲಯ ಸಮಿತಿ ಸದಸ್ಯ ಮೋಹನ್ ಕುಮಾರ್, ಬುದ್ಧ ಭಾರತ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷ ಜೆ.ರಾಮಯ್ಯ, ಶಶಿರೇಖಾ ಬಿ. ಇದ್ದರು.

ಜುಲೈ ಅಂತ್ಯ ಮತ್ತು ಆಗಸ್ಟ್ ತಿಂಗಳಿನಲ್ಲಿ ನೀರಿನ ಅಭಾವ ಉಂಟಾಗದಂತೆ ಈಗಿನಿಂದಲೇ ಲೆಕ್ಕಾಚಾರ ಹಾಕಿ ನೀರು ನಿರ್ವಹಣೆ ಮಾಡುವಂತೆ ನೀರಾವರಿ ಇಲಾಖೆ ಮತ್ತು ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳಿಗೆ ಸ್ಪಷ್ಟ ನಿರ್ದೇಶನ ನೀಡಲಾಗಿದೆ. ಬರಲಿರುವ ದಿನಗಳಲ್ಲಿ ಸಾರ್ವಜನಿಕರಿಗೆ ಮತ್ತು ರೈತರಿಗೆ ನೀರಿನ ತೊಂದರೆಯಾಗದಂತೆ ಸಮರ್ಪಕವಾಗಿ ನೀರು ಹಂಚಿಕೆ ಮಾಡಲು ಸರ್ಕಾರ ಬದ್ಧವಾಗಿದೆ.
• **ಎನ್.ಚಲುವರಾಯಸ್ವಾಮಿ** ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು

ಇಂದಿನಿಂದ ಬೀರೇದೇವರ ಜಾತ್ರಾ ಮಹೋತ್ಸವ

ಉದ್ಭವ ಮೂರ್ತಿ ಶ್ರೀಕಾಟಣ್ಣಸ್ವಾಮಿ ಏಳು ಕೂಟದ ಬೀರೇದೇವರು | ಗ್ರಾಮವನ್ನು ನವ ವಧುವಿನಂತೆ ಸಿಂಗಾರಗೊಳಿಸಿದ ಭಕ್ತರು

• **ಕರಡಹಳ್ಳಿ ಸೀತಾರಾಮು**
ಕನ್ನಡಪ್ರಭ ವಾರ್ತೆ ನಾಗಮಂಗಲ

ಇಂದಿನಿಂದ ನಾಲ್ಕು ದಿನಗಳ ಕಾಲ ನಡೆಯುವ ಉದ್ಭವ ಮೂರ್ತಿ ಶ್ರೀಕಾಟಣ್ಣಸ್ವಾಮಿ ಏಳು ಕೂಟದ ಬೀರೇದೇವರುಗಳ ಜಾತ್ರಾ ಮಹೋತ್ಸವಕ್ಕೆ ತಾಲೂಕಿನ ಬೀರೇಶ್ವರಪುರ ಗ್ರಾಮವನ್ನು ನವ ವಧುವಿನಂತೆ ಸಿಂಗಾರಗೊಳಿಸಿ ಏಳುಕೂಟದ ದೇವರುಗಳು ಹಾಗೂ ಭಕ್ತಾದಿಗಳನ್ನು ಬರಮಾಡಿಕೊಳ್ಳಲು ಸಕಲ ರೀತಿಯಲ್ಲೂ ಸಜ್ಜುಗೊಳಿಸಲಾಗಿದೆ.

44 ವರ್ಷಗಳ ನಂತರ ಗ್ರಾಮದಲ್ಲಿ ಶ್ರೀಕಾಟಣ್ಣಸ್ವಾಮಿ ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ ಗ್ರಾಮದ ಎಲ್ಲಾ ಮನೆಗಳು ಮತ್ತು ದೇವಸ್ಥಾನಗಳಿಗೆ ಸುಣ್ಣ ಬಣ್ಣ ಮಾಡಿ ಹೊಸ ಮೆರುಗು ನೀಡಲಾಗಿದೆ. ಇಡೀ ಗ್ರಾಮವು ಹಬ್ಬದ ಸಂಭ್ರಮದಿಂದ ಕೂಡಿದೆ. ಜಾತ್ರಾ ಮಹೋತ್ಸವಕ್ಕೆ ಆಗಮಿಸುವ ಭಕ್ತರಿಗೆ ಸ್ವಾಗತ ಕೋರುವ ಬ್ಯಾನರ್‌ಗಳು ರಾರಾಜಿಸುತ್ತಿವೆ. ತಳಿರು ತೋರಣ ವಿದ್ಯುತ್ ದೀಪಾಲಂಕಾರದಿಂದ ಇಡೀ ಗ್ರಾಮವನ್ನು ವಿಶೇಷ ರೀತಿ ಅಲಂಕರಿಸಲಾಗಿದೆ.

ಕಾಟಣ್ಣಸ್ವಾಮಿಗೆ ದೇವಸ್ಥಾನವಿಲ್ಲ: ಉದ್ಭವ ಮೂರ್ತಿ ಕಾಟಣ್ಣಸ್ವಾಮಿಗೆ ದೇವಸ್ಥಾನವಿಲ್ಲ. ಗ್ರಾಮದ ಶ್ರೀದೊಡ್ಡಯ್ಯಸ್ವಾಮಿ ದೇವಸ್ಥಾನದ ಹಿಂಭಾಗದ ಆವರಣದಲ್ಲಿ ಕಾಟಣ್ಣಸ್ವಾಮಿ ನೆಲೆಸಿದ್ದಾರೆನ್ನುವ ಜಾಗದಲ್ಲಿ ತೆರೆದ ವೇದಿಕೆ ಮಾದರಿಯಲ್ಲಿ ಕಾಂಕ್ರೀಟ್ ನೆಲಹಾಸು ನಿರ್ಮಿಸಲಾಗಿದೆ. ಉದ್ಭವ ಮೂರ್ತಿ ಇರುವ ಜಾಗಕ್ಕೆ ಪೂಜೆ ಸಲ್ಲಿಸಿ ಮೂರು ಕೊಳಗದಷ್ಟು ಕಣಗಿಲೆ ಹೂವುಗಳನ್ನು ಸುರಿಯುತ್ತಿದ್ದಂತೆ ಹೂವಿನ ನಡುವೆ ಕಾಟಣ್ಣಸ್ವಾಮಿ ದೇವರು ಉದ್ಭವಗೊಂಡು ಮೇಲೆದ್ದು ಬರಲಿದೆ ಎಂಬುದು ಗ್ರಾಮದ ಹಿರಿಯರ ನಂಬಿಕೆ.



3 ಲಕ್ಷ ರು.ವೆಚ್ಚದ ಹಸಿರು ಚಪ್ಪರ: ಕಾಟಣ್ಣಸ್ವಾಮಿ ನೆಲೆಸಿರುವ ಜಾಗದಲ್ಲಿ 3ಲಕ್ಷಕ್ಕೂ ಅಧಿಕ ವೆಚ್ಚದಲ್ಲಿ ತೆಂಗಿನಗರಿ ಹಾಗೂ ವಿವಿಧ ಬಗೆಯ ಫಲಪುಷ್ಪಗಳಿಂದ ಕೂಡಿದ ಅತ್ಯಾಧುನಿಕ ಶೈಲಿಯ ಹಸಿರು ಚಪ್ಪರ ಹಾಕಲಾಗುತ್ತಿದೆ. ನಾಡಿನ ವಿವಿಧ ಭಾಗಗಳಿಂದ 50 ಸಾವಿರಕ್ಕೂ ಹೆಚ್ಚು ಭಕ್ತರು ಸೇರುವ ಹಿನ್ನಲೆಯಲ್ಲಿ ಗ್ರಾಮದ ಎಲ್ಲಾ ರಸ್ತೆ ಹಾಗೂ ಚರಂಡಿಗಳನ್ನು ಸ್ವಚ್ಛಗೊಳಿಸಿ ಕುಡಿಯುವ ನೀರು ಸೇರಿದಂತೆ ಮೂಲ ಸೌಕರ್ಯಗಳನ್ನು ಕಲ್ಪಿಸಲಾಗಿದೆ. ವಾಹನಗಳ ನಿಲುಗಡೆಗೆ ಗ್ರಾಮದ ಹೊರವಲಯದ ಮೂರ್ನಾಲ್ಕು ಸ್ಥಳಗಳಲ್ಲಿ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ.

ಮುಖ್ಯಾಂಶ
- 44 ವರ್ಷಗಳ ನಂತರ ನಡೆಯುತ್ತಿರುವ ಜಾತ್ರೆ
- ಎಲ್ಲೆಡೆ ತಳಿರು ತೋರಣ, ವಿದ್ಯುತ್ ದೀಪಾಲಂಕಾರ
- 3 ಲಕ್ಷ ರು.ವೆಚ್ಚದ ಹಸಿರು ಚಪ್ಪರ ನಿರ್ಮಾಣ
- ವಿವಿಧ ಕಾರ್ಯಕ್ರಮಗಳ ಆಯೋಜನೆ

ನಾಲ್ಕು ದಿನಗಳ ಕಾಲ ನಡೆಯುವ ಜಾತ್ರಾ ಮಹೋತ್ಸವದಲ್ಲಿ ಬೀರೇಶ್ವರಪುರ ಗ್ರಾಮದ ಶ್ರೀ ದೊರೆ ದೊಡ್ಡಯ್ಯಸ್ವಾಮಿ, ಶ್ರೀ ಕಾಟಣ್ಣಸ್ವಾಮಿ, ತುಪ್ಪದಮಡು ಗ್ರಾಮದ ದಳವಾಯಿ ದೊಡ್ಡಯ್ಯ ಸ್ವಾಮಿ, ಮುಂಗೊಂಡ ಮುಂದಲಾರತಿ ಚಿಕ್ಕಯ್ಯ ಸ್ವಾಮಿ, ದೊಡ್ಡಾಬಾಲ ಗ್ರಾಮದ ಮಂತ್ರಿ ಹುಚ್ಚಪ್ಪಸ್ವಾಮಿ, ಹೊಂಗನೂರಮ್ಮದೇವಿ, ಅರಕೆರೆ ಗ್ರಾಮದ ಗಾಳಿಗುಂಡ ಹುಚ್ಚಪ್ಪಸ್ವಾಮಿ ಹಾಗೂ ಜೋಡಿನೇರಲಕೆರೆ ಗ್ರಾಮದ ದೊಡ್ಡದೇವಮ್ಮ ಮತ್ತು ಚಿಕ್ಕದೇವಮ್ಮ ದೇವಿಯ ಉತ್ಸವಮೂರ್ತಿಗಳು ಪಾಲ್ಗೊಳ್ಳಲಿವೆ.

ಸೋಮವಾರ ಸಂಜೆ ಗ್ರಾಮಕ್ಕೆ ಆಗಮಿಸುವ ಏಳು ಕೂಟದ ದೇವರುಗಳಿಗೆ ಧೂಪ ದೀಪದಾರತಿ ಮಾಡಿ ಮಂಗಳವಾದ್ಯ, ತಮಟೆ ಮೇಳದೊಂದಿಗೆ ಅದ್ದೂರಿ ಸ್ವಾಗತ ಕೋರಿ ಬರಮಾಡಿಕೊಳ್ಳಲಾಗುವುದು. ನಂತರ ಹೂ ಹೊಂಬಾಳೆ, ಗಂಗಾಸ್ನಾನ ವಿಶೇಷ ಪೂಜಾ ಕೈಂಕರ್ಯಗಳು ಜರುಗಲಿವೆ. ಬಳಿಕ ಗ್ರಾಮದ ದೊಡ್ಡಯ್ಯಸ್ವಾಮಿ ದೇವಸ್ಥಾನದ ಆವರಣದಲ್ಲಿ ಭಕ್ತರಿಗೆ ಅನ್ನಸಂತರ್ಪಣೆ ಆಯೋಜಿಸಲಾಗಿದೆ.

ಮೇ 5 ರ ಬೆಳಗಿನಜಾವ 3ಗಂಟೆಗೆ ನಂದಿ ಧ್ವಜ ಕುಣಿತ, ಹಲಗೆ ಕುಣಿತ, ವೀರಮಕ್ಕಳ ಕುಣಿತ ಸೇರಿದಂತೆ ವಿವಿಧ ಜಾನಪದ ಕಲಾತಂಡಗಳೊಂದಗೆ ಏಳು ಕೂಟದ ದೇವರುಗಳ ಉತ್ಸವ ಮೆರವಣಿಗೆ ನಂತರ ಶ್ರೀ ಕಾಟಣ್ಣಸ್ವಾಮಿ ದೇವಸ್ಥಾನದ ಮುಂಭಾಗದಲ್ಲಿ ವೈಭವದ ಕೊಂಡೋತ್ಸವ ನಡೆಯಲಿದೆ. ಅಂದು ಬೆಳಿಗ್ಗೆ 10 ಗಂಟೆಗೆ ದೊಡ್ಡಾಬಾಲದ ಶ್ರೀ ಮಂತ್ರಿ ಹುಚ್ಚಪ್ಪಸ್ವಾಮಿ ಬೀಡಿಕೆಗೆ ಹೋದ ನಂತರ ವಿವಿಧ ಗ್ರಾಮಗಳಿಂದ ಬಂದಿರುವ ಏಳುಕೂಟದ ದೇವರುಗಳ ಗ್ರಾಮಸ್ಥರಿಂದ ಬೀಡಿಕೆ ಉತ್ಸವ ಅನ್ನಸಂತರ್ಪಣೆ ಬಳಿಕ ಸಂಜೆ ವೀರಮಕ್ಕಳಿಂದ ಹಲ್ಲುಮರಿ ಸಿಗಿಯುವ ಕಾರ್ಯಕ್ರಮ ಜರುಗಲಿದೆ. ಸಂಜೆ 6ಕ್ಕೆ ಎಲ್ಲಾ ದೇವರುಗಳಿಗೆ ಗಂಗಾಸ್ನಾನ ಮಹಾ ಮಂಗಳಾರತಿ ನಡೆಯಲಿದೆ. ಬೀಡಿಕೆಯವರು ಹಾಗೂ ಭಕ್ತಾದಿಗಳಿಂದ ಆರತಿ ಸೇವೆ ಬಳಿಕ ದೇವರುಗಳ ಉತ್ಸವ ನಡೆಯಲಿದೆ.

ಮೇ.6ರ ಬೆಳಿಗ್ಗೆ ಶ್ರೀ ಕಾಟಣ್ಣಸ್ವಾಮಿ ದೇವಸ್ಥಾನದಿಂದ ದೇವತೆಗಳ ಉತ್ಸವ ಹೊರಟು ಗ್ರಾಮದ ಹೊರವಲಯದ ಬನ್ನಿಮಂಟಪದಲ್ಲಿ ಸೇರಿ ಹಣ್ಣು ತುಪ್ಪ ಸೇವೆಯೊಂದಿಗೆ ಶಿವಪೂಜೆ ನಡೆಸಿ ಮಧ್ಯಾಹ್ನದವರೆಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಯಲಿದೆ. ನಂತರ ಪುರುಷರು ಮತ್ತು ಹೆಣ್ಣು ಮಕ್ಕಳ ಪ್ರತ್ಯೇಕ ಓಕಳಿ ಆಟ ನಡೆಯಲಿದೆ.

ಮೇ 7ರ ಬೆಳಗ್ಗೆ ಶ್ರೀ ಕಾಟಣ್ಣಸ್ವಾಮಿ ದೇವಸ್ಥಾನದಲ್ಲಿ ವಿವಿಧ ಬಗೆಯ ಪೂಜಾ ವಿಧಿ ವಿಧಾನಗಳ ನಂತರ ಏಳು ಕೂಟದ ದೇವರುಗಳನ್ನು ಆಯಾ ಗ್ರಾಮಗಳಿಗೆ ಕರೆದೊಯ್ಯಲು ಕೂಟ ಹೊಡೆಯುವ ಕಾರ್ಯಕ್ರಮ ನಡೆಯಲಿದೆ. ನಂತರ ಎಲ್ಲಾ ದೇವರುಗಳನ್ನು ಗ್ರಾಮದಿಂದ ಬೀಳ್ಕೊಡಲಾಗುವುದು. ಜಾತ್ರೆ.ಲ್ಲಿ ಪಾಲ್ಗೊಳ್ಳುವ ಸಹಸ್ರಾರು ಭಕ್ತರಿಗೂ ಪ್ರತಿನಿತ್ಯ ಬೆಳಗಿನ ಉಪಹಾರ, ಮಧ್ಯಾಹ್ನ ಹಾಗೂ ರಾತ್ರಿ ಅನ್ನಸಂತರ್ಪಣೆ ಆಯೋಜಿಸಲಾಗಿದೆ.

ಸುದ್ದಿ ಸಿಂಚನ

ಮಾರಕಾಸ್ತ್ರಗಳಿಂದ ಯುವಕನ ಬರ್ಬರ ಹತ್ಯೆ



ಶ್ರೀರಂಗಪಟ್ಟಣ: ಲಾಂಗು, ಮಚ್ಚುಗಳಿಂದ ಅಟ್ಟಾಡಿಸಿ ಮುಸ್ಲಿಂ ಯುವಕನನ್ನು ಬರ್ಬರವಾಗಿ ಹತ್ಯೆ ಮಾಡಿರುವ ಘಟನೆ ಟೌನ್ ವ್ಯಾಪ್ತಿಯ ಗಂಜಾಂ ನಲ್ಲಿ ನಡೆದಿದೆ. ಮೈಸೂರು ಮೂಲದ ಮಹಮದ್ ಸೋಯಬ್ (22) ಕೊಲೆಯಾದ ಯುವಕ. ಮೈಸೂರಿನಿಂದ ಮೂವರು ಬೈಕ್‌ಗಳಲ್ಲಿ ಹಿಂಬಾಲಿಸಿಕೊಂಡು ಬಂದ ಏಳೆಂಟು ಜನರ ತಂಡ ಗಂಜಾಂನ ಶ್ರೀನಿಮಿಷಾಂಬ ದೇವಾಲಯ ರಸ್ತೆಯಲ್ಲಿ ಅಡ್ಡಗಟ್ಟಿ ಮಾರಕಾಸ್ತ್ರಗಳಿಂದ ಹಲ್ಲೆಗೆ ಮುಂದಾಗಿದ್ದಾರೆ. ಈ ವೇಳೆ ಮಹಮದ್ ಸೋಯಬ್ ಅವರಿಂದ ತಪ್ಪಿಸಿಕೊಳ್ಳಲು ಓಡಿ ಹೋಗಿ ನಿರ್ಮಾಣ ಹಂತದಲ್ಲಿದ್ದ ಚಂದ್ರು ಅವರ ತೋಟದ ಮನೆ ಒಳಗೆ ಹೋಗಿದ್ದಾನೆ. ಆದರೆ, ಹಂತಕರು ಆತನನ್ನು ಬಿಡದೆ ಹಿಂಬಾಲಿಸಿ ಹತ್ಯೆ ಮಾಡಿ ಬಳಿಕ ಮಾರಕಾಸ್ತ್ರಗಳನ್ನು ಸ್ಥಳದಲ್ಲೇ ಬಿಸಾಡಿ ಪರಾರಿಯಾಗಿದ್ದಾರೆ. ಮಹಮದ್ ಸೋಯಬ್ ಕಳೆದ 15 ದಿನಗಳ ಹಿಂದೆ ಮದುವೆಯಾಗಿದ್ದನು. ಕಾರ್ಪೆಂಟರ್ ಕೆಲಸ ಮಾಡುತ್ತಿದ್ದ ಈತನ ಜೊತೆ ಮೈಸೂರಿನ ರಾಜೀವ್ ನಗರ ನಿವಾಸಿ ಬಿಲಾಲ್ ಎಂಬ ವ್ಯಕ್ತಿ ಬಂದಿದ್ದನು. ಘಟನೆ ಬಳಿಕ ಆತ ಓಡಿ ಹೋಗಿರುವುದಾಗಿ ಪೊಲೀಸರಿಂದ ತಿಳಿದು ಬಂದಿದೆ. ಸ್ಥಳಕ್ಕೆ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಸಿ.ಇ.ತಿಮ್ಮಯ್ಯ ಸೇರಿದಂತೆ ಸ್ಥಳೀಯ ಪೊಲೀಸರು ಹಾಗೂ ಶ್ವಾನದಳ ಮತ್ತು ಬೆರಳಚ್ಚು ತಜ್ಞರು ಭೇಟಿ ನೀಡಿ ಪರಿಶೀಲನೆ ನಡೆಸಿ, ಘಟನಾ ಸ್ಥಳದಲ್ಲಿ ಬಿದ್ದ ಮಾರಕಾಸ್ತ್ರ ಹಾಗೂ ಒಂದು ಬೈಕ್ ನ್ನು ಪೊಲೀಸರು ವಶಕ್ಕೆ ಪಡೆದು ತನಿಖೆ ಮುಂದುವರಿಸಿದ್ದಾರೆ. ಈ ಸಂಬಂಧ ಶ್ರೀರಂಗಪಟ್ಟಣ ಟೌನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ರಾಜ್ಯಸಭೆಗೆ ದೇವೇಗೌಡ್ರ ಪುನರಾಯ್ಕೆಗೆ ಮನವಿ



ಮಂಡ್ಯ: ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರನ್ನು ರಾಜ್ಯಸಭೆಗೆ ಪುನರಾಯ್ಕೆ ಮಾಡಲು ಎನ್‌ಡಿಎ ಮೈತ್ರಿಕೂಟ ಮುಂದಾಗಬೇಕು ಎಂದು ಜಾತ್ಯತೀತ ಜನತಾದಳ ಪರಿಶಿಷ್ಟ ವಿಭಾಗದ ರಾಜ್ಯ ಸಂಘಟನಾ ಕಾರ್ಯದರ್ಶಿ ಎಂ.ಎಲ್.ತುಳಸೀಧರ್ ಮನವಿ ಮಾಡಿದ್ದಾರೆ. ಈ ಕುರಿತು ಹೇಳಿಕೆ ನೀಡಿರುವ ಅವರು, ಎಚ್.ಡಿ.ದೇವೇಗೌಡರ ರಾಜ್ಯಸಭಾ ಸದಸ್ಯತ್ವ ಮುಂದಿನ ಜೂನ್ ತಿಂಗಳಲ್ಲಿ ಅಂತ್ಯಗೊಳ್ಳಲಿದೆ. ಆದರೆ, ರಾಜ್ಯಸಭೆಗೆ ಅನುಭವಿ ಮತ್ತು ಮುತ್ಸದ್ದಿ ರಾಜಕಾರಣಿ ಮಾಜಿ ಪ್ರಧಾನಿಗಳ ಅಗತ್ಯತೆ ಹೆಚ್ಚಾಗಿದೆ ಎಂಬುದು ಪ್ರತಿಯೊಬ್ಬರಿಗೂ ಮನದಟ್ಟಾಗುತ್ತಿದೆ ಎಂದಿದ್ದಾರೆ. ಸಂಸತ್ತಿನಲ್ಲಿ ಕರ್ನಾಟಕ ಮತ್ತು ದೇಶದ ಹಿತ ಬಯಸಿ ಸಮರ್ಥವಾಗಿ ಧ್ವನಿ ಎತ್ತುವ ನಾಯಕರಾಗಿರುವ ದೇವೇಗೌಡರು, ರೈತರು, ಕಾರ್ಮಿಕರು, ಕೃಷಿ ಕೂಲಿಕಾರರು ಸೇರಿದಂತೆ ಕನ್ನಡಿಗರ ಪರ ಸದಾಕಾಲ ಹೋರಾಡುತ್ತಾರೆ ಎಂದು ತಿಳಿಸಿದ್ದಾರೆ. ಕುಡಿಯುವ ನೀರಿನ ಬಿಕ್ಕಟ್ಟಿನ ಬಗ್ಗೆ ರಾಜ್ಯ ಸಭೆಯಲ್ಲಿ ಸರ್ಕಾರದ ಗಮನ ಸೆಳೆದು, ನೀರಾವರಿ ಯೋಜನೆಗಳ ಅನುಷ್ಠಾನಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡಿದ್ದಾರೆ. ಕರ್ನಾಟಕದ ಪಾಲಿಗೆ ಇವರ ರಾಷ್ಟ್ರೀಯ ನಾಯಕತ್ವ ಮೈಲುಗಲ್ಲು, ರಾಜ್ಯ ಮತ್ತು ಕೇಂದ್ರದ ನಡುವೆ ಸಂಪರ್ಕದ ಕೊಂಡಿಯಂತಿರುವ ಎಚ್.ಡಿ. ದೇವೇಗೌಡರು ಮುಂದಿನ ದಿನಗಳಲ್ಲಿಯೂ ಸಂಸತ್ತಿನಲ್ಲಿ ಇದ್ದರೆ ಮೇಕೆದಾಟು ಯೋಜನೆ ಜಾರಿ ಸೇರಿದಂತೆ ಹಲವು ಸಮಸ್ಯೆಗಳಿಗೆ ಪರಿಹಾರ ದೊರಕುವ ವಿಶ್ವಾಸ ಹೆಚ್ಚಾಗಿದೆ. ನಾಡಿನ ಅಭಿವೃದ್ಧಿ ದೃಷ್ಟಿಯಿಂದ ರಾಜ್ಯಸಭೆಗೆ ಮತ್ತೊಂದು ಅವಧಿಗೆ ಪುನರಾಯ್ಕೆ ಮಾಡಲು ಬಿಜೆಪಿ ಪಕ್ಷ ಮುಂದಾಗಬೇಕು ಎಂದು ಆಗ್ರಹಿಸಿದ್ದಾರೆ.

ಸಲಹಾ ಸಮಿತಿ ಸಭೆ

ಮಂಡ್ಯ: ನಗರದ ಜಿಪಂ ಸಭಾಂಗಣದಲ್ಲಿ ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ನೇತೃತ್ವದಲ್ಲಿ ಜಿಲ್ಲೆಯ ಶಾಸಕರು, ಅಧಿಕಾರಿಗಳೊಂದಿಗೆ ಕೆ.ಆರ್.ಎಸ್ ಅಣೆಕಟ್ಟೆಯಲ್ಲಿ ಲಭ್ಯವಿರುವ ನೀರು ಹಾಗೂ ಬೆಳೆಗಳ ಬಗ್ಗೆ ಚರ್ಚೆ ನಡೆಸಲಾಯಿತು. ಸಭೆ ಬಳಿಕ ಮಾತನಾಡಿದ ಸಚಿವರು, ಕಾವೇರಿ ಅಚ್ಚುಕಟ್ಟು ಪ್ರದೇಶ ನಾಲ್ಕು ಪ್ರಮುಖ ಅಣೆಕಟ್ಟುಗಳ ನೀರಿನ ಮಟ್ಟ ಮತ್ತು ವಾಸ್ತವ ಸ್ಥಿತಿಯನ್ನು ಸರಿಯಾಗಿ ಅರ್ಥ ಮಾಡಿಕೊಂಡು ಕೆಲಸ ಮಾಡಬೇಕಿದೆ. ಜಿಲ್ಲೆಯ ವಿವಿಧ ಭಾಗಗಳಲ್ಲಿ, ಅದರಲ್ಲೂ ಮುಖ್ಯವಾಗಿ ಕಟ್ಟಕಡೆಯ ಭಾಗದ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸದಂತೆ ಎಚ್ಚರ ವಹಿಸಬೇಕಿದೆ. ಇದಕ್ಕಾಗಿ ಕೆಲವು ಕೆರೆಗಳಿಗೆ ನೀರು ತುಂಬಿಸುವುದು ಅನಿವಾರ್ಯವಾಗಿದೆ. ಜುಲೈ ಅಂತ್ಯ ಮತ್ತು ಆಗಸ್ಟ್ ತಿಂಗಳಿನಲ್ಲಿ ನೀರಿನ ಅಭಾವ ಉಂಟಾಗದಂತೆ ಈಗಿನಿಂದಲೇ ಲೆಕ್ಕಾಚಾರ ಹಾಕಿ ನೀರು ನಿರ್ವಹಣೆ ಮಾಡುವಂತೆ ನೀರಾವರಿ ಇಲಾಖೆ ಮತ್ತು ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳಿಗೆ ಸ್ಪಷ್ಟ ನಿರ್ದೇಶನ ನೀಡಲಾಗಿದೆ ಎಂದರು.

ಪ್ರಸ್ತುತ ಸಾಮಾನ್ಯ ಹೆರಿಗೆಗಳ ಸಂಖ್ಯೆ ಕಡಿಮೆ

ಇಂದು ಶೇ.80ರಷ್ಟು ಗರ್ಭಿಣಿಯರು ಶಸ್ತ್ರಚಿಕಿತ್ಸೆ ಮೂಲಕ ಹೆರಿಗೆ | ಇದು ಒಳ್ಳೆಯ ಬೆಳವಣಿಗೆಯಲ್ಲ: ನಿಶ್ಚಲಾನಂದನಾಥ ಶ್ರೀ

• **ಕನ್ನಡಪ್ರಭ ವಾರ್ತೆ** ಕೆ.ಎಂ.ದೊಡ್ಡಿ

ಸದೃಢ ಆರೋಗ್ಯದ ಕೊರತೆಯಿಂದಾಗಿ ಪ್ರಸ್ತುತ ದಿನಗಳಲ್ಲಿ ಶೇ.80ರಷ್ಟು ಗರ್ಭಿಣಿಯರು ಸಿಜೇರಿಯನ್ (ಶಸ್ತ್ರಚಿಕಿತ್ಸೆ) ಮೂಲಕವೇ ಮಕ್ಕಳನ್ನು ಪಡೆಯುತ್ತಿರುವುದು ಒಳ್ಳೆಯ ಬೆಳವಣಿಗೆಯಲ್ಲ ಎಂದು ವಿಶ್ವ ಒಕ್ಕಲಿಗರ ಮಹಾ ಸಂಸ್ಥಾನ ಮಠದ ಪೀಠಾಧ್ಯಕ್ಷ ಡಾ.ನಿಶ್ಚಲಾನಂದನಾಥ ಸ್ವಾಮೀಜಿ ಆತಂಕ ವ್ಯಕ್ತಪಡಿಸಿದರು.

ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸ್ಫೂರ್ತಿ ಲಯನ್ಸ್ ಸಂಸ್ಥೆಯಿಂದ ಹಸಿವು-ಆರೈಕೆ ಮತ್ತು ಆರೋಗ್ಯ ಕಿಟ್ ವಿತರಣಾ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿ, ಇಂದು ಸಾಮಾನ್ಯ ಹೆರಿಗೆಗಳು ಕಡಿಮೆಯಾಗುತ್ತಿವೆ. ಸಿಜೇರಿಯನ್ (ಶಸ್ತ್ರ ಚಿಕಿತ್ಸೆ) ಹೆರಿಗೆಗಳು ಹೆಚ್ಚಾಗುತ್ತಿರುವ ಬಗ್ಗೆ ಎಚ್ಚರ ವಹಿಸುವುದು ಅಗತ್ಯ ಎಂದರು.

ಗರ್ಭಿಣಿ ಮತ್ತು ಬಾಣಂತಿಯರು ಸ್ಥಳೀಯವಾಗಿ ದೊರೆಯುವ ಹಾಲು, ಮೊಟ್ಟೆ, ನುಗ್ಗೆಸೊಪ್ಪು, ಸೀಬೆ, ಪರಂಗಿ ಹಣ್ಣು ಸೇರಿದಂತೆ ಇತರೆ ಹಣ್ಣು ಮತ್ತು ತರಕಾರಿಗಳನ್ನು ಹೆಚ್ಚು ಸೇವಿಸಿ ಆರೋಗ್ಯವನ್ನು ಸದೃಢವಾಗಿಸಿಕೊಳ್ಳಬೇಕು. ಆ ಮೂಲಕ ಸಹಜ ಹೆರಿಗೆಗೆ ಪ್ರಯತ್ನಿಸಬೇಕೆಂದು ಸಲಹೆ ನೀಡಿದರು.

ನಮ್ಮ ಪೂರ್ವಾಶ್ರಮದ ಹೆತ್ತಮ್ಮನಿಗೆ ಹದಿನಾಲ್ಕು ಮಕ್ಕಳು. ಅವರು 89 ವರ್ಷದವರೆಗೂ ಸದೃಢ ಆರೋಗ್ಯವಂತರಾಗಿ ಬಾಳ್ವೆ ನಡೆಸಿದ್ದರು. ಆದರೆ, ಈ ತಲೆಮಾರಿನ ಹೆಣ್ಣುಮಕ್ಕಳು ಹೆಚ್ಚು ಅನಾರೋಗ್ಯಕ್ಕೀಡಾಗುತ್ತಿರುವುದು ವಿಷಾದನೀಯ ಎಂದರು.



ಕೆ.ಎಂ.ದೊಡ್ಡಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ನಡೆದ ಹಸಿವು-ಆರೈಕೆ ಮತ್ತು ಆರೋಗ್ಯ ಕಿಟ್ ವಿತರಣೆ ಕಾರ್ಯಕ್ರಮವನ್ನು ವಿಶ್ವ ಒಕ್ಕಲಿಗರ ಮಹಾ ಸಂಸ್ಥಾನ ಮಠದ ಪೀಠಾಧ್ಯಕ್ಷ ಡಾ.ನಿಶ್ಚಲಾನಂದನಾಥ ಸ್ವಾಮೀಜಿ ಉದ್ಘಾಟಿಸಿದರು.

ಈ ಹಿಂದೆ ಹಿರಿಯರಿಗೆ ಏಳೆಂಟು ಮಕ್ಕಳಾದರೂ ಸಹಜ ಹೆರಿಗೆಗಳಾಗುತ್ತಿದ್ದವು. ಆದರೆ, ಇಂದು ಸಾಮಾನ್ಯ ಹೆರಿಗೆಗಳು ಅಪರೂಪವಾಗುತ್ತಿವೆ. ಹೆರಿಗೆ ಸಮಯದಲ್ಲಿ ಉಂಟಾಗುವ ನೋವು ಸಹಜ. ಗರ್ಭಿಣಿಯರು ತಾಳ್ಮೆ ವಹಿಸಬೇಕು. ಮಗುವಿನ ಜನನದ ನಂತರ ತಮ್ಮ ನೋವು ಮರೆಯಾಗಿ ಮೂಡುವ ಸಂತಸ ಶಾಶ್ವತವಾಗಿರುತ್ತದೆ ಎಂಬುದನ್ನು ಹಿರಿಯ ವೈದ್ಯ ಡಾ.ಟಿ.ಎಚ್.ಆಂಜನಪ್ಪ ಅವರ ಕಿವಿ ಮಾತನ್ನು ಪೋಷಕರು ಮತ್ತು ಗರ್ಭಿಣಿಯರು ಪಾಲಿಸಬೇಕು ಎಂದರು.

ಹುಟ್ಟುಹಬ್ಬದ ಹೆಸರಿನಲ್ಲಿ ಇಂತಹ ಮೌಲ್ಯಯುತ ಕಾರ್ಯಕ್ರಮ ಆಯೋಜನೆ ಮಾಡುವುದು ಹಾಗೂ ಆಚರಿಸುವುದು ಅತ್ಯುತ್ತಮ ಕೆಲಸ. ಸ್ಫೂರ್ತಿ ಲಯನ್ಸ್ ಸಂಸ್ಥೆಯ ದಾಸೋಹ ಕಾರ್ಯಕ್ರಮ ನಿರಂತರವಾಗಿರಲಿ ಎಂದು ಹಾರೈಸಿದರು.

ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ ಡಾ.ಟಿ.ಎಚ್.ಆಂಜನಪ್ಪ ಮಾತನಾಡಿ, ಮನುಷ್ಯ ಇಂದಿನ ಆಹಾರ ಪದ್ಧತಿಯಿಂದ ಆಯಸ್ಸು ಕಡಿಮೆ ಮಾಡಿಕೊಳ್ಳುತ್ತಿದ್ದಾರೆ. ಮನುಷ್ಯನಿಗೆ 120 ವರ್ಷ ಆಯಸ್ಸಿದೆ. ಉತ್ತಮ ಆರೋಗ್ಯಕ್ಕಾಗಿ ಹಣ್ಣು ತರಕಾರಿ ಹೆಚ್ಚು ಉಪಯೋಗಿಸಿ ಎಂದರು.

ಕಾರ್ಯಕ್ರಮಕ್ಕೂ ಮೊದಲು ಯಲಾದಹಳ್ಳಿಯ ಮಳವಳ್ಳಿ ದೇವೇಗೌಡರ ಎತ್ತಿನ ಬಂಡಿ ಗಾಡಿಯಲ್ಲಿ ಮದ್ದೂರು-ಮಳವಳ್ಳಿ ಮುಖ್ಯ ರಸ್ತೆಯಲ್ಲಿ ಡಾ.ನಿಶ್ಚಲಾನಂದನಾಥ ಸ್ವಾಮೀಜಿ ಮತ್ತು ಗಣ್ಯರನ್ನು ಜನಪದ ಕಲಾತಂಡದ ಪೂಜಾ ಕುಣಿತದೊಂದಿಗೆ ಮೆರವಣಿಗೆ ಮೂಲಕ ವೇದಿಕೆಗೆ ಕರೆತರಲಾಯಿತು.

ಜನರಕ್ಷಾ ಗ್ರಾಮೀಣಾಭಿವೃದ್ಧಿ ಟ್ರಸ್ಟ್ ಅಧ್ಯಕ್ಷ ಕೃಷ್ಣೇಗೌಡ, ಜಿಲ್ಲಾ ರಾಜ್ಯಪಾಲ ಕೆ.ಎಲ್.ರಾಜಶೇರ್, ಕೆಂಗಲ್‌ಗೌಡ, ಸೋಮೇಗೌಡ, ಸಿದ್ದೇಗೌಡ, ಲಯನ್ಸ್ ಸಂಸ್ಥೆ ಜಿಲ್ಲಾ ರಾಜ್ಯಪಾಲ ಕೆ.ಎಲ್.ರಾಜಶೇಖರ್, ಜಿಲ್ಲಾ 2ನೇ ಉಪರಾಜ್ಯಪಾಲ ಸಿದ್ದೇಗೌಡ, ಪ್ರಾಂತೀಯ ಅಧ್ಯಕ್ಷ ಟಿ.ಆರ್.ಸೋಮೇಗೌಡ, ಸ್ಫೂರ್ತಿ ಲಯನ್ಸ್ ಸಂಸ್ಥೆ ಅಧ್ಯಕ್ಷ ಕೆ.ಎಲ್. ಶಿವರಾಮು ಸಂಸ್ಥೆ ಕಾರ್ಯದರ್ಶಿ ಬಿ.ಎಸ್.ಬೋರೇಗೌಡ, ಪಟ್ಟರಾಮರಾಜೇ ಅರಸು, ಡಿ.ಎ.ಕೆರೆ ಚಂದ್ರಶೇಖರ್, ಸದಸ್ಯರಾದ ಅಣ್ಣೂರು ಸಂದೀಪ್, ವಕ್ರತುಂಡ ವೆಂಕಟೇಶ್, ಚೆನ್ನಶೆಟ್ಟಿ, ಬೋರೇಗೌಡ, ದೇವರಾಜು, ರಘುವೆಂಕಟೇಗೌಡ, ಬಿದರಹಳ್ಳಿ ಹನುಮಯ್ಯ, ಪಿಡಿಒ ಸುಧಾ, ಲೀಲಾರಾಮೇಗೌಡ ಸೇರಿದಂತೆ ಮತ್ತಿತರಿದ್ದರು.

ದಕ್ಷಿಣದ 7 ಸಕ್ಕರೆ ಕಾರ್ಖಾನೆ ವಿರುದ್ಧ ಕಾನೂನು ಕ್ರಮ ಕೈಗೊಳ್ಳಿ: ಗೂಳಿಗೌಡ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

- ರೈತರಿಗೆ ಕೊಡಬೇಕಾದ ಹಣಕ್ಕೆ ತಡೆ ಹಿನ್ನೆಲೆ
- ಸೂಕ್ತ ಕ್ರಮಕ್ಕಾಗಿ ರಾಜ್ಯ ಸರ್ಕಾರಕ್ಕೆ ಒತ್ತಾಯ

2025-26ನೇ ಹಂಗಾಮಿನ ಕಬ್ಬು ಬೆಳೆಗಾರರ ಬಾಕಿ ಪ್ರೋತ್ಸಾಹಧನ ಪಾವತಿ, ರೈತರ ಬ್ಯಾಂಕ್ ಖಾತೆ ವಿವರಗಳನ್ನು ನೀಡಲು ನಿರಾಕರಿಸುತ್ತಿರುವ ಏಳು ಸಕ್ಕರೆ ಕಾರ್ಖಾನೆಗಳ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ಗ್ಯಾರಂಟಿ ಪ್ರಾಧಿಕಾರದ ರಾಜ್ಯ ಉಪಾಧ್ಯಕ್ಷ ದಿನೇಶ್ ಗೂಳಿಗೌಡ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ.



ಈ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಕ್ಕರೆ ಖಾತೆ ಸಚಿವ ಶಿವಾನಂದ ಪಾಟೀಲ್ ಅವರಲ್ಲಿ ಮನವಿ ಮಾಡಿರುವ ಅವರು, 2025-26ನೇ ಸಾಲಿನ ಹಂಗಾಮಿನಲ್ಲಿ ರಾಜ್ಯದ ರೈತ ಸಮುದಾಯದ ಆರ್ಥಿಕ ಹಿತದೃಷ್ಟಿಯಿಂದ ಸರ್ಕಾರ ಪ್ರತಿ ಟನ್ ಕಬ್ಬಿಗೆ 100 ರು. ಹೆಚ್ಚುವರಿ ಪ್ರೋತ್ಸಾಹಧನ ಘೋಷಿಸಿತ್ತು. ಆದರೆ. ದಕ್ಷಿಣ ಕರ್ನಾಟಕದ ಬನ್ನಾರಿ ಅಮ್ಮನ್ ಶುಗರ್ಸ್ (ಕೊಳ್ಳೇಗಾಲ), ಚಾಮುಂಡೇಶ್ವರಿ ಶುಗರ್ಸ್ ಲಿ (ಚನ್ನರಾಯಪಟ್ಟಣ), ಕೋರಮಂಡಲ ಶುಗರ್ಸ್ (ಕೆ.ಆರ್.ಪೇಟೆ), ಚಾಮುಂಡೇಶ್ವರಿ ಶುಗರ್ಸ್ ಲಿಮಿಟೆಡ್ (ಮದ್ದೂರು), ಎಂಆರ್‌ಎನ್ ಕೇನ್ ಪವರ್ ಆ್ಯಂಡ್ ಬಯೋರಿಫೈನರೀಸ್ ಪ್ರೈ.ಲಿ (ಪಾಂಡವಪುರ), ಎನ್ ಎಸ್ ಎಲ್ ಶುಗರ್ಸ್ ಲಿ. (ಮದ್ದೂರು), ಬನ್ನಾರಿ ಅಮ್ಮನ್‌ಶುಗರ್ಸ್‌ಲಿಮಿಟೆಡ್ (ನಂಜನಗೂಡು) ಎಂಬ ಖಾಸಗಿ ಕಾರ್ಖಾನೆಗಳ ಹಠಮಾರಿ ಧೋರಣೆ ಮತ್ತು ಕಾನೂನು ಸಂಘರ್ಷದಿಂದ ರೈತರಿಗೆ ತೊಂದರೆಯಾಗಿದೆ ಎಂದು ಆರೋಪಿಸಿದ್ದಾರೆ.

ರಾಜ್ಯದ ಒಟ್ಟು 81 ಕಾರ್ಖಾನೆಗಳ ಪೈಕಿ ಉತ್ತರ ಕರ್ನಾಟಕದ 73 ಕಾರ್ಖಾನೆಗಳು ಸರ್ಕಾರದ ಆದೇಶಕ್ಕೆ ಬದ್ಧವಾಗಿ ರೈತರಿಗೆ ಸಕಾಲದಲ್ಲಿ ಪ್ರತಿ ಟನ್‌ಗೆ ಹೆಚ್ಚುವರಿ 100 ರು.ಗಳನ್ನು ಪಾವತಿ ಮಾಡುತ್ತಿವೆ. ಆದರೆ, ದಕ್ಷಿಣ ಕರ್ನಾಟಕದ ಈ ಏಳು ಖಾಸಗಿ ಕಾರ್ಖಾನೆಗಳು ಸರ್ಕಾರದ ಆದೇಶ ಪ್ರಶ್ನಿಸಿ ನ್ಯಾಯಾಲಯದ ಮೊರೆ ಹೋಗಿವೆ. ಅಲ್ಲದೆ, ಜಿಲ್ಲಾಡಳಿತಗಳ ಸಭೆ ಮತ್ತು ಸೂಚನೆಗಳನ್ನು ಕಿಂಚಿತ್ತೂ ಲೆಕ್ಕಿಸದೆ, ರೈತರಿಗೆ ಕೊಡಬೇಕಾದ ಹಣ ತಡೆಯುತ್ತಿವೆ ಎಂದು ದೂರಿದ್ದಾರೆ.

ಭವನ ನಿರ್ಮಾಣಕ್ಕೆ ಭೂಮಿ ಪೂಜೆ



• **ಕನ್ನಡಪ್ರಭ ವಾರ್ತೆ** ಪಾಂಡವಪುರ

ತಾಲೂಕಿನ ಕಣಿವೆಕೊಪ್ಪಲು ಗ್ರಾಮದಲ್ಲಿ 24 ಲಕ್ಷ ರು. ವೆಚ್ಚದ ಡಾ.ಬಿ.ಆರ್.ಅಂಬೇಡ್ಕರ್‌ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ಶಾಸಕ ದರ್ಶನ್ ಪುಟ್ಟಣ್ಣಯ್ಯ ಭೂಮಿ ಪೂಜೆ ನೆರವೇರಿಸಿದರು.

ನಂತರ ಸಂಸದರ 5 ಲಕ್ಷ ರು. ಅನುದಾನದಲ್ಲಿ ನಿರ್ಮಾಣಗೊಂಡಿರುವ ಶುದ್ಧ ಕುಡಿಯುವ ನೀರು ಘಟಕಕ್ಕೆ ಚಾಲನೆ ನೀಡಿ, ಡಾ.ಬಿ.ಆರ್.ಅಂಬೇಡ್ಕರ್‌ಸಮುದಾಯ ಭವನನಿರ್ಮಾಣಜಾಗವಿಶಾಲಾವಾಗಿದ್ದು, ಮತ್ತಷ್ಟು ಅನುದಾನ ನೀಡಿದರೆ ದೊಡ್ಡದಾಗಿ ನಿರ್ಮಾಣ ಮಾಡಿಕೊಳ್ಳುವುದಾಗಿ ತಿಳಿಸಿ, ಮುಂದಿನ ದಿನಗಳಲ್ಲಿ ಇನ್ನು ಹೆಚ್ಚುವರಿ ಅನುದಾನ ನೀಡುವ ಬಗ್ಗೆ ಕ್ರಮ ವಹಿಸಲಾಗುವುದು ಎಂದರು.

ತಾಲೂಕಿನಲ್ಲಿ ಬಹುತೇಕ ಗ್ರಾಮಗಳಲ್ಲಿ ಅಂಬೇಡ್ಕರ್‌ಸಮುದಾಯ ಭವನಗಳು ಅರ್ಧಕ್ಕೆ ನಿಂತಿವೆ. ಇನ್ನೂ ಕೆಲವು ಭವನಗಳು ನಿರ್ಮಾಣಗೊಂಡು ಉದ್ಘಾಟನೆಗೆ ಸಿದ್ಧಗೊಂಡಿವೆ. ಮತ್ತಷ್ಟು ಗ್ರಾಮದಲ್ಲಿ ಭವನ ನಿರ್ಮಾಣವಾಗಬೇಕಿದೆ. ಎಲ್ಲದಕ್ಕೂ ಮುಂದಿನ ದಿನಗಳಲ್ಲಿ ಕ್ರಮವಹಿಸಲಾಗುವುದು ಎಂದರು.

ಈ ವೇಳೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹೊನಗಾನಹಳ್ಳಿ ಕಿಟ್ಟಿ, ದಸಂಸ ಮುಖಂಡ ಕಣಿವೆರಾಮು, ವಕೀಲ ಕಣಿವೆ ಯೋಗೇಶ್, ಪಿಎಲ್ ಡಿ ಬ್ಯಾಂಕ್ ನಿರ್ದೇಶಕ ಚಂದ್ರಶೇಖರ್, ಕಿಸಾನ್ ಕಾಂಗ್ರೆಸ್ ಅಧ್ಯಕ್ಷ ಸಿ.ಆರ್.ರಮೇಶ್, ಬಿ.ಜೆ.ಸ್ವಾಮಿ, ವೆಂಕಟೇಶ್, ದೇವರಾಜು, ಮರೀಗೌಡ, ಅಂಕಪ್ಪ, ಶಶಾಂಕ್, ರಮೇಶ್, ಸುರೇಶ್, ರೇವಣ್ಣ, ಸಮಾಜ ಕಲ್ಯಾಣ ಇಲಾಖೆ ಸಹಾಯಕಿ ನಿರ್ದೇಶಕಿ ಕೋಮಲ, ಪಿಡಿಒ ಕುಮಾರ್, ಯಾ.ಸುಬ್ಬೇಗೌಡ ಸೇರಿದಂತೆ ಅನೇಕ ಮುಖಂಡರು ಇದ್ದರು.

ಪಂಚಶೀಲ ಪಾದಯಾತ್ರೆಗೆ ಸಹಕಾರ ನೀಡಿ: ಬಂತೇ ಬೋಧಿದತ್ತ ತೇರಾ



• **ಕನ್ನಡಪ್ರಭ ವಾರ್ತೆ** ಮಂಡ್ಯ

ಮುಂದಿನ ತಿಂಗಳು ಜಿಲ್ಲೆಯಲ್ಲಿ ಪಂಚಶೀಲ ಪಾದಯಾತ್ರೆ ಆರಂಭವಾಗಲಿರುವ ಹಿನ್ನೆಲೆಯಲ್ಲಿ ಪೂರ್ವಭಾವಿಯಲ್ಲಿ ಜಿಲ್ಲಾ ಬೌದ್ಧ ಧಮ್ಮ ಉಪಾಸಕರು, ಮುಖಂಡರು ಸಭೆ ನಡೆಸಿದರು.

ಚಾಮರಾಜನಗರ ನಳಂದ ಬೌದ್ಧ ವಿಶ್ವವಿದ್ಯಾಲಯ ಕಾರ್ಯದರ್ಶಿ ಬಂತೇ ಬೋಧಿದತ್ತ ತೇರಾ ಮಾತನಾಡಿ, ಜೂನ್ ತಿಂಗಳ ಅಂತ್ಯದ ವಾರದಲ್ಲಿ ಮಂಡ್ಯ ಜಿಲ್ಲೆಯ 7 ತಾಲೂಕುಗಳ ಕೇಂದ್ರಸ್ಥಾನಗಳಲ್ಲಿ ಪಂಚಶೀಲ ಪಾದಯಾತ್ರೆ ಸಂಚರಿಸಲಿದೆ. ಸ್ಥಳೀಯ ಬೌದ್ಧ ಧಮ್ಮ ಉಪಾಸಕರು ಮತ್ತು ಭೋದಿಸತ್ವ ಡಾ.ಬಿ.ಆರ್.ಅಂಬೇಡ್ಕರ್‌ಅವರ ಅನುಯಾಯಿಗಳು ಪಾಲ್ಗೊಂಡು ಸ್ವಾಗತಿಸಿ, ಯಶಸ್ವಿಗೆ ಸಹಕಾರ ನೀಡಲಿದ್ದಾರೆ ಎಂದು ನುಡಿದರು.

ಭಾರತೀಯ ಬೌದ್ಧ ಮಹಾಸಭಾ ಸಂಚಾಲಕ ಶಿವರಾಜ್, ಬೌದ್ಧ ಉಪಾಸಕರಾದ ವೆಂಕಟಗಿರಿಯಯ್ಯ, ನಾರಾಯಣಸ್ವಾಮಿ, ಡಾ.ಸುರೇಶ್, ಡಯಟ್ ಗುರುಮೂರ್ತಿ, ಚಲುವಯ್ಯ, ಮೋಹನ್ ಚಿಕ್ಕಮಂಡ್ಯ, ವೃದ್ಧಾಶ್ರಮದ ಮುಖ್ಯಸ್ಥೆ ಡಿ.ಎಂ.ಪ್ರೀತಿ, ಕೆ.ಸಿದ್ದಯ್ಯ, ವೆಂಕಟೇಶ್, ಚಂದ್ರಶೇಖರ್, ಬಸವರಾಜು, ಅಶ್ವಥ್, ಪ್ರೊ.ಎಂ.ವೆಂಕಟೇಶ್, ಅನ್ನದಾನಿ ಮತ್ತಿತರರಿದ್ದರು.

ಕೆ.ರಾಜನ್‌ಗೆ ಆತ್ಮೀಯ ಬೀಳ್ಕೊಡುಗೆ



• **ಕನ್ನಡಪ್ರಭ ವಾರ್ತೆ** ಮದ್ದೂರು

ಪಟ್ಟಣದ ಭಾರತೀಯ ಜೀವ ವಿಮೆ ನಿಗಮದ ಶಾಖೆಯಲ್ಲಿ 3 ವರ್ಷಗಳ ಕಾಲ ಮುಖ್ಯ ಪ್ರಬಂಧಕರಾಗಿ ಕರ್ತವ್ಯ ನಿರ್ವಹಿಸಿ ಚೆನ್ನೈ ಸೇಲ್ಸ್ ಟ್ರೈನಿಂಗ್ ಸೆಂಟರ್‌ನ ಪ್ರಾಂಶುಪಾಲರಾಗಿ ಬಡ್ತಿ ಹೊಂದಿ ವರ್ಗಾವಣೆಗೊಂಡ ಕೆ.ರಾಜನ್ ಅವರಿಗೆ ಜೀವ ವಿಮೆ ಸಿಬ್ಬಂದಿ ವರ್ಗದಿಂದ ಆತ್ಮೀಯವಾಗಿ ಬೀಳ್ಕೊಡಲಾಯಿತು.

ಎಲ್‌ಐಸಿ ಕಚೇರಿ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕಳೆದ ಸಾಲಿನಲ್ಲಿ ಮದ್ದೂರು ಶಾಖೆ ರಾಜನ್ ಮಾರ್ಗದರ್ಶನದಲ್ಲಿ 15, 138 ಪಾಲಿಸಿಗಳ ಸಂಗ್ರಹಣೆಯ ಮೂಲಕ 33 ಕೋಟಿಗೂ ಹೆಚ್ಚು ಪ್ರೀಮಿಯಂ ಪೂರ್ಣಗೊಳಿಸಿದ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಹೀಗಾಗಿ ಇವರ ಕಾರ್ಯದಕ್ಷತೆಯಿಂದಾಗಿ ಮೈಸೂರು ವಿಭಾಗದ ಮದ್ದೂರು ಶಾಖೆ ಪ್ರಥಮ ಸ್ಥಾನ ಪಡೆಯಲು ಸಾಧ್ಯವಾಗಿದೆ ಎಂದು ವಿಮೆ ಸಲಹೆಗಾರರ ಸಂಘದ ಅಧ್ಯಕ್ಷ ಧನಪಾಲ ಶೆಟ್ಟಿ ಪ್ರಶಂಸೆ ವ್ಯಕ್ತಪಡಿಸಿದರು. ಕೆ.ರಾಜನ್ ಅವರ 33 ವರ್ಷಗಳ ಸೇವೆಯಲ್ಲಿ ಯಾವುದೇ ಕಪ್ಪುಚುಕ್ಕೆ ಇಲ್ಲದಂತೆ ಪ್ರತಿನಿಧಿಗಳು, ಸಿಬ್ಬಂದಿ ವರ್ಗ, ಪಾಲಿಸಿದಾರರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದರು. ಇವರ ನಿಸ್ವಾರ್ಥ ಸೇವೆ ಚೆನ್ನೈ ಸೇಲ್ಸ್ ಸೆಂಟರ್‌ಗು ಮುಂದುವರೆಯಲಿ ಎಂದರು. ನೂತನ ಮುಖ್ಯ ಪ್ರಬಂಧಕ ಸ್ವಾಮಿನಾಥನ್, ಉಪವ್ಯವಸ್ಥಾಪಕ ಎಂ.ಉದಯ್, ಪ್ರತಿನಿಧಿಗಳ ಸಂಘದ ಅಧ್ಯಕ್ಷ ಸಿ.ಎಸ್.ವಾಸು, ಮೈಸೂರು ವಿಭಾಗದ ಮುಖ್ಯ ಜೀವ ವಿಮೆ ಸಲಹೆಗಾರರ ಸಂಘದ ಪ್ರಧಾನ ಕಾರ್ಯದರ್ಶಿ ಮುತ್ತುರಾಜು, ನಿರ್ದೇಶಕರಾದ ತಿರುಮಲೇಶ್, ರಾಮಚಂದ್ರ, ಚೆನ್ನಪ್ಪ ಜಿ, ಕೃಷ್ಣೆಗೌಡ, ಸವಿತಾ, ವಾಣಿ ಹಾಗೂ ಸಿಬ್ಬಂದಿ ವರ್ಗದವರು ಪಾಲ್ಗೊಂಡಿದ್ದರು.

ಪ್ರತಿಭಟನೆ | ಹೆದ್ದಾರಿ ಕಾಮಗಾರಿ ಸ್ಥಳದಲ್ಲಿ ಪೊಲೀಸರ ನಿಯೋಜನೆ

ಸರ್ವಿಸ್ ರಸ್ತೆ ನಿರ್ಮಾಣಕ್ಕೆ ರೈತರ ಆಗ್ರಹ

• **ಕನ್ನಡಪ್ರಭ ವಾರ್ತೆ** ಶ್ರೀರಂಗಪಟ್ಟಣ



ಶ್ರೀರಂಗಪಟ್ಟಣ- ಕುಶಾಲನಗರ ಸಂಪರ್ಕ ಕಲ್ಪಿಸುವ ಹೆದ್ದಾರಿಗೆ ಈ ಹಿಂದೆ ಸ್ಥಳೀಯ ರೈತರು ಸರ್ವಿಸ್ ರಸ್ತೆ ನಿರ್ಮಿಸುವಂತೆ ಪ್ರತಿಭಟನೆ ನಡೆಸಿದ್ದ ಹಿನ್ನೆಲೆಯಲ್ಲಿ ಇದೀಗ ಕಾಮಗಾರಿ ಸ್ಥಳದಲ್ಲಿ ಹೆದ್ದಾರಿ ಪ್ರಾಧಿಕಾರದವರು ಪೊಲೀಸರನ್ನು ನಿಯೋಜನೆ ಮಾಡಿಕೊಂಡಿದ್ದಾರೆ.

ತಾಲೂಕಿನ ಬೊಮ್ಮೂರು ಅಗ್ರಹಾರ ಗ್ರಾಮದ ಬಳಿ ಹಾದು ಹೋಗುತ್ತಿರುವ ಕುಶಾಲನಗರ ಹೆದ್ದಾರಿ ಕಾಮಗಾರಿಯಿಂದ ಸ್ಥಳೀಯ ರೈತರು ತಮ್ಮ ಜಮೀನುಗಳಿಗೆ ತೆರಳಲು ತೊಂದರೆಯಾಗಲಿದೆ, ಸರ್ವಿಸ್ ರಸ್ತೆ ನಿರ್ಮಿಸಿ, ನಂತರ ಹೆದ್ದಾರಿ ಕಾಮಗಾರಿ ನಡೆಸುವಂತೆ ಪ್ರತಿಭಟನೆ ನಡೆಸಿದ್ದರು.

ಅಲ್ಲದೆ ಮಾಜಿ ಶಾಸಕ ರವೀಂದ್ರ ಶ್ರೀಕಂಠಯ್ಯ ನೇತೃತ್ವದ ರೈತರ ನಿಯೋಗ ದೆಹಲಿಗೆ ತೆರಳಿ ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ಹಾಗೂ ನಿತಿನ್ ಗಡ್ಕರಿ ಅವರನ್ನು ಭೇಟಿ ಮಾಡಿ ಹೆದ್ದಾರಿಯಿಂದ ಸ್ಥಳೀಯ ರೈತರಿಗಾಗುವ ಸಮಸ್ಯೆಗಳ ಬಗ್ಗೆ ಮನವರಿಕೆ ಮಾಡಿ ಸರ್ವಿಸ್ ರಸ್ತೆ ನಿರ್ಮಿಸಿಕೊಡುವಂತೆ ಮನವಿ ಮಾಡಿ ಬಂದಿದ್ದರು.

ಈ ವಿಷಯವಾಗಿ ಯಾವುದೇ ಮಾಹಿತಿ ಹಾಗೂ ಸೂಚನೆ ಬಾರದ ಹಿನ್ನೆಲೆ ಬಿ. ಅಗ್ರಹಾರ, ಪಾಲಹಳ್ಳಿ, ಶ್ರೀರಂಗಪಟ್ಟಣ, ಹೊಸಹಳ್ಳಿ, ಬೆಳಗೊಳ ಸೇರಿ ಇತರೆ ಗ್ರಾಮಗಳ ರೈತರು ಮತ್ತೆ ಸರ್ವಿಸ್ ರಸ್ತೆಗಾಗಿ ಪ್ರತಿಭಟನೆ ಮೂಲಕ ರಸ್ತೆ ಕಾಮಗಾರಿ ತಡೆಯಲು ದಿನಾಂಕ ನಿಗದಿಗೊಳಿಸುತ್ತಿದ್ದಾರೆ ಎಂದು ಹೈವೇ ರಸ್ತೆ ಕಾಮಗಾರಿ ವಿಳಂಭವಾಗುವ ಹಿನ್ನೆಲೆಯಲ್ಲಿ ಹೆದ್ದಾರಿ ಪ್ರಾಧಿಕಾರದವರ ಮನವಿ ಮೇರೆಗೆ ಡಿವೈಎಸ್ಪಿ ಕೃಷ್ಣ ಕುಮಾರ್‌ನೇತೃತ್ವದಲ್ಲಿ ಪೊಲೀಸರನ್ನು ನಿಯೋಜಿಸಿಕೊಂಡಿದ್ದಾರೆ.

ತಾಲೂಕಿನ ಬೆಳಗೊಳ ಬಳಿಯ ಹಿರಿದೇವಿ ದೇವಾಲಯದ ಮೈದಾನದ ಬಳಿ ಎರಡು ಡಿಎಆರ್‌ಪೊಲೀಸರು ಸೇರಿದಂತೆ ಶ್ರೀರಂಗಪಟ್ಟಣದ ವಿವಿಧ ಠಾಣೆಗಳ ಪೊಲೀಸರನ್ನು ನಿಯೋಜಿಸಿ ಕಾಮಗಾರಿಗೆ ವಿಳಂಭವಾಗದಂತೆ ನೋಡಿಕೊಳ್ಳಲಾಗುತ್ತಿದೆ ಎಂದು ತಿಳಿದು ಬಂದಿದೆ.

ಬೇಡಿಕೆ ಈಡೇರಿಸಿ | ಗುಣಮಟ್ಟದ ವಿದ್ಯುತ್ ಸರಬರಾಜಿಗೆ ಒತ್ತಾಯ

ಬೆಳೆಗಳ ರಕ್ಷಣೆಗೆ ಆಗ್ರಹಿಸಿ ರೈತರ ಧರಣಿ

• **ಕನ್ನಡಪ್ರಭ ವಾರ್ತೆ** ಮಂಡ್ಯ

ಬೆಳೆದು ನಿಂತಿರುವ ಬೆಳೆಗಳ ರಕ್ಷಣೆಗಾಗಿ ಕೆಆರ್‌ಎಸ್ ಮತ್ತು ಹೇಮಾವತಿ ಜಲಾಶಯದಿಂದ ನಾಲೆಗಳಿಗೆ ನೀರು ಹರಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಶಾಸಕ ದರ್ಶನ್ ಪುಟ್ಟಣ್ಣಯ್ಯ ನೇತೃತ್ವದಲ್ಲಿ ರೈತಸಂಘದ ಕಾರ್ಯಕರ್ತರು ನಗರದ ಜಿಲ್ಲಾ ಪಂಚಾಯ್ತಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಜಿಲ್ಲಾ ಪಂಚಾಯಿತಿ ಕಚೇರಿ ಎದುರು ಸೇರಿದ ರೈತ ಸಂಘದ ಕಾರ್ಯಕರ್ತರು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ರೈತ ವಿರೋಧಿ ಧೋರಣೆಗಳನ್ನು ಖಂಡಿಸಿದರು ಹಾಗೂ ವಿವಿಧ ನ್ಯಾಯಸಮ್ಮತ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿದರು. ಕೃಷಿ ಪಂಪ್‌ಸೆಟ್‌ಗಳಿಗೆ ಹಗಲು ವೇಳೆ 7 ಗಂಟೆ ಗುಣಮಟ್ಟದ ವಿದ್ಯುತ್ ಸರಬರಾಜು ಮಾಡಬೇಕು. ಈ ಹಿಂದೆ ಇದ್ದಂತೆಯೇ ಕೃಷಿ ಪಂಪ್‌ಸೆಟ್ ವಿದ್ಯುತ್ ಸಂಪರ್ಕಗಳ ಅಕ್ರಮ- ಸಕ್ರಮಕ್ಕೆ ರೈತರ ಪಾಲನ್ನು ಪಡೆದು ಉಳಿದ ಎಲ್ಲಾ ವೆಚ್ಚವನ್ನು ಸರ್ಕಾರವೇ ಭರಿಸಬೇಕು. ಹಾಲಿ ಬೆಳೆದು ನಿಂತಿರುವ ಬೆಳೆಗಳ ರಕ್ಷಣೆ ಮತ್ತು ಜನ-ಜಾನುವಾರುಗಳ ಕುಡಿವ ನೀರಿಗಾಗಿ ಕೆಆರ್‌ಎಸ್ ಹೇಮಾವತಿ ಅಣೆಕಟ್ಟೆಗಳ ಮೂಲಕ ನಾಲೆಗಳಿಗೆ ಕನಿಷ್ಠ 2 ಕಟ್ಟು ನೀರು ಹರಿಸಬೇಕು ಎಂದು ಕೋರಿದರು.



ಪ್ರಕೃತಿ ವಿಕೋಪದಿಂದ ಬೆಳೆ ಹಾಗೂ ಮನೆಗಳಿಗೆ ಹಾನಿಯಾಗಿರುವ ಸಂತ್ರಸ್ತರಿಗೆ ಸೂಕ್ತ ಪರಿಹಾರ ನೀಡಬೇಕು, ಭತ್ತ ಕಟಾವು ಯಂತ್ರಗಳಿಗೆ ಜಿಲ್ಲಾದ್ಯಂತ ಏಕರೀತಿಯ(ಪ್ರತಿ ಗಂಟೆಗೆ₹2200) ಬಾಡಿಗೆ ದರ ನಿಗದಿಪಡಿಸುವುದು, ಈ ಸಂಬಂಧ ಯಂತ್ರಗಳ ಮಾಲೀಕರು ಮತ್ತು ಕೃಷಿ ಇಲಾಖೆ ಅಧಿಕಾರಿಗಳ ಸಭೆ ಕರೆದು ನಿರ್ಣಯ ಕೈಗೊಳ್ಳುವಂತೆ ಆಗ್ರಹಿಸಿದರು. ಬ್ಯಾಂಕುಗಳು ಮತ್ತು ಮತ್ತು ಮೈಕ್ರೋ ಫೈನಾನ್ಸ್ ಹಾವಳಿ ತಡೆಗಾಗಿ ಅಧಿಕಾರಿಗಳ ಸಭೆ ಕರೆದು ಚರ್ಚಿಸಿ ಸಮಸ್ಯೆ ಬಗೆಹರಿಸಬೇಕು, ಕೆ.ಆರ್. ಪೇಟೆಯಲ್ಲಿ ವಿದ್ಯುತ್ ಕೊರತೆ ನೀಗಿಸಲು ಕನಿಷ್ಠ ಎರಡು ವಿದ್ಯುತ್ ವಿತರಣಾ ಕೇಂದ್ರ ಸ್ಥಾಪಿಸಬೇಕು ಎಂದು ಒತ್ತಾಯಿಸಿದರು.

ಜಿಲ್ಲಾ ರೈತಸಂಘದ ಅಧ್ಯಕ್ಷ ಎ.ಎಲ್.ಕೆಂಪೂಗೌಡ, ಪ್ರಧಾನ ಕಾರ್ಯದರ್ಶಿ ಜಿ.ಎಸ್.ಲಿಂಗಪ್ಪಾಜಿ, ಖಜಾಂಚಿ ಎಸ್.ಕೆ.ರವಿಕುಮಾರ್, ವಿಜಯ್‌ಕುಮಾರ್, ಮರುವನಹಳ್ಳಿ ಶಂಕರ್ ಸೇರಿ ರೈತ ಮುಖಂಡರು ಇದ್ದರು.

ಪಾಂಡವಪುರ: ತಣಿವು ಬೇಸಿಗೆ ಶಿಬಿರ

• **ಕನ್ನಡಪ್ರಭ ವಾರ್ತೆ** ಪಾಂಡವಪುರ

ಬೇಸಿಗೆ ಶಿಬಿರಗಳು ಮಕ್ಕಳ ಜ್ಞಾನಾರ್ಜನೆಗೆ, ಗುಣಾತ್ಮಕ ಹಾಗೂ ಮೌಲ್ಯಯುತ ಚಿಂತನೆಗಳನ್ನು ಅಳವಡಿಸಿಕೊಳ್ಳಲು ಉಪಯುಕ್ತವಾಗಿವೆ ಎಂದು ನಂದಗೋಕುಲ ಕಿಡ್ಸ್ ವರ್ಲ್ಡ್‌ನ ಅಧ್ಯಕ್ಷ ಆರ್.ಎ.ನಾಗಣ್ಣ ತಿಳಿಸಿದರು.



ಪಟ್ಟಣದ ಕೃಷ್ಣನಗರದ ಮೂರನೇ ಹಂತದ ನಂದಗೋಕುಲ ಕಿಡ್ಸ್‌ವರ್ಲ್ಡ್‌ನಿಂದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ತಣಿವು ಬೇಸಿಗೆ ಶಿಬಿರ-ಚಿಣ್ಣರ ಸಂತೆಯಲ್ಲಿ ಮಾತನಾಡಿದ ಅವರು, ಶೈಕ್ಷಣಿಕ ವರ್ಷದಲ್ಲಿ ಬಹುತೇಕ ಮಕ್ಕಳು 4 ಗೋಡೆಗಳ ಮಧ್ಯೆ ಇರುತ್ತಾರೆ. ರಜಾ ದಿನಗಳಲ್ಲಿ ಬೇಸಿಗೆ ಶಿಬಿರಗಳು ಸ್ಫೂರ್ತಿದಾಯಕವಾದ ಅನುಭೂತಿ ನೀಡುತ್ತವೆ. ಮಕ್ಕಳ ಬೌದ್ಧಿಕ ಹಾಗೂ ಮನೋವಿಕಾಸಕ್ಕೆ ಉಪಯುಕ್ತ ಚಟುವಟಿಕೆಗಳನ್ನು ಈ ಶಿಬಿರಗಳಲ್ಲಿ ಆಯೋಜಿಸಿರುವುದರಿಂದ ಮಕ್ಕಳು ಆಸಕ್ತಿಯಿಂದ ಕಲಿಯುತ್ತಾರೆ. ಧರ್ಮ ಮತ್ತು ಸಂಸ್ಕೃತಿಯ ಬಗ್ಗೆ ಅರಿವು ಮೂಡಿಸಿಕೊಳ್ಳಲು ಕೂಡ ಇದು ಸಹಕಾರಿಯಾಗಿದೆ ಎಂದರು.

ಯಾವುದೇ ಮೇಲು ಕೀಳು ಎಂಬ ಭೇದ ಭಾವವಿಲ್ಲದೆ ಭಾರತೀಯ ಜೀವನ ಪದ್ಧತಿ ತಿಳಿದುಕೊಳ್ಳಲು ಚಿಣ್ಣರ ಸಂತೆ ಸಹಕಾರಿ. ಮಕ್ಕಳಲ್ಲಿ ವ್ಯವಹಾರಿಕ ಜ್ಞಾನ ಈಗಿನಿಂದಲೇ ಬೆಳೆಯಬೇಕು. ಅದರ ಅರಿವು ಮತ್ತು ಪ್ರಜ್ಞೆ ಜಾಗೃತಗೊಳ್ಳಲು ಶಿಬಿರಗಳಲ್ಲಿ ಪಾಲ್ಗೊಳ್ಳುವುದು ಮುಖ್ಯ ಎಂದರು. ಕಾರ್ಯಕ್ರಮದಲ್ಲಿ ನಿವೃತ್ತ ಡಿಡಿಪಿಐ ಭಾಗ್ಯಮ್ಮ, ಕಿಡ್ಸ್‌ವರ್ಲ್ಡ್‌ನ ಕಾರ್ಯದರ್ಶಿ ಎನ್.ರಶ್ಮಿ, ಮೀನಾಕ್ಷಿ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕಿ ಅನುಸೂಯ, ವಿದ್ಯಾ, ಭೂಮಿಕ, ರೂಪ, ಪವಿತ್ರ, ಅನಿತ, ಅವಿನಾಶ್, ಮಂಜಮ್ಮ ಮತ್ತಿತರರು ಪಾಲ್ಗೊಂಡಿದ್ದರು.